ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 Vol: | ಸಂಚಿಕೆ: 101 Issue: | ರಾಯಚೂರು Raichur | 03-10-2026 | ಶನಿವಾರ Sarurday | ಪುಟ : 04 Page: | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685

## ರೋಹಿತ್ ಶರ್ಮಾ ಸ್ಫೋಟಕ ಶತಕ: ಆಯ್ಕೆದಾರ ಅಜಿತ್ ಅಗರ್ಕರ್ ಈಗ ಪಶ್ಚಾತ್ತಾಪ ಪಡುತ್ತಿರಬಹುದು; ಮಾಜಿ ಆಟಗಾರ ಗರಂ!




## 44 ವರ್ಷಗಳ ಬಳಿಕ ಚಿನ್ನದ ಸಂಭ್ರಮ: ಚೀನಾವನ್ನು ಮಣಿಸಿದ ಭಾರತದ ಮಹಿಳಾ ಹಾಕಿ ಪಡೆ

ಐಚಿ-ನಾಗೋಯಾ, ಅ.2: ಏಷ್ಯನ್ ಗೇಮ್ಸ್‌ನಲ್ಲಿ ಭಾರತೀಯ ಮಹಿಳಾ ಹಾಕಿ ತಂಡ ಐತಿಹಾಸಿಕ ಸಾಧನೆ ಮಾಡಿದೆ. ಫೈನಲ್‌ನಲ್ಲಿ ಹಾಲಿ ಚಾಂಪಿಯನ್ ಚೀನಾವನ್ನು 10 ಗೋಲಿನಿಂದ ಮಣಿಸಿದ ಭಾರತ, 44 ವರ್ಷಗಳ ಬಳಿಕ ಮಹಿಳಾ ಹಾಕಿಯಲ್ಲಿ ಏಷ್ಯನ್ ಗೇಮ್ ಚಿನ್ನದ ಪದಕವನ್ನು ತನ್ನದಾಗಿಸಿಕೊಂಡಿದೆ. ಈ ಗೆಲುವಿನೊಂದಿಗೆ ಭಾರತ 2028ರ ಲಾಸ್ ಏಂಜಲೀಸ್ ಒಲಿಂಪಿಕ್ಸ್‌ಗೆ ನೇರ ಅರ್ಹತೆಯನ್ನೂ ಪಡೆದುಕೊಂಡಿದೆ.




ಆರಂಭದಿಂದಲೇ ತೀವ್ರ ಪೈಪೋಟಿಯಿಂದ ಕೂಡಿದ್ದ ಪಂದ್ಯದಲ್ಲಿ ಭಾರತದ ಲಾಲ್ರೆಮ್ಸಿಯಾಮಿ 10ನೇ ನಿಮಿಷದಲ್ಲಿ ಗೋಲು ಬಾರಿಸಿ ತಂಡಕ್ಕೆ 10 ಮುನ್ನಡೆ ತಂದುಕೊಟ್ಟರು. ವಿಶೇಷವೆಂದರೆ ಇದು ಅವರ 200ನೇ ಅಂತಾರಾಷ್ಟ್ರೀಯ ಪಂದ್ಯವಾಗಿತ್ತು. ನಂತರ ಚೀನಾ ಸಮಬಲ ಸಾಧಿಸಲು ನಿರಂತರ ದಾಳಿ ನಡೆಸಿದರೂ ಭಾರತೀಯ ರಕ್ಷಣಾ ಪಡೆ ಅದಕ್ಕೆ ಅವಕಾಶ ನೀಡಲಿಲ್ಲ.

ಗೋಲ್‌ಕೀಪರ್ ಸವಿತಾ ಪುನಿಯಾ ಭಾರತದ ಗೆಲುವಿನಲ್ಲಿ ನಿರ್ಣಾಯಕ ಪಾತ್ರ ವಹಿಸಿದರು. ಚೀನಾಕ್ಕೆ ದೊರೆತ ಪೆನಾಲ್ಟಿ ಸ್ಟ್ರೋಕ್ ಅನ್ನು ಅದ್ಭುತವಾಗಿ ತಡೆದ ಅವರು, ಭಾರತದ ಮುನ್ನಡೆಯನ್ನು ಕೊನೆಯವರೆಗೂ ಉಳಿಸಿಕೊಳ್ಳಲು ನೆರವಾದರು. ಅಂತಿಮ ಕ್ಷಣಗಳವರೆಗೂ ಚೀನಾದ ಒತ್ತಡವನ್ನು ಸಮರ್ಥವಾಗಿ ಎದುರಿಸಿದ ಭಾರತ 10 ಅಂತರದ ಗೆಲುವಿನೊಂದಿಗೆ ಚಿನ್ನಕ್ಕೆ ಮುತ್ತಿಟ್ಟಿತು.

ಭಾರತೀಯ ಮಹಿಳಾ ಹಾಕಿ ತಂಡ ಕೊನೆಯ ಬಾರಿ 1982ರ ದೆಹಲಿ ಏಷ್ಯನ್ ಗೇಮ್ಸ್‌ನಲ್ಲಿ ಚಿನ್ನ ಗೆದ್ದಿತ್ತು. ನಂತರ 1998 ಮತ್ತು 2018ರಲ್ಲಿ ಫೈನಲ್ ತಲುಪಿದ್ದರೂ ಕ್ರಮವಾಗಿ ದಕ್ಷಿಣ ಕೊರಿಯಾ ಮತ್ತು ಜಪಾನ್ ವಿರುದ್ಧ ಸೋತು ಬೆಳ್ಳಿಗೆ ತೃಪ್ತಿಪಟ್ಟಿತ್ತು. ಇದೀಗ 44 ವರ್ಷಗಳ ಸುದೀರ್ಘ ಕಾಯುವಿಕೆಗೆ ತೆರೆ ಎಳೆದಿರುವ ಭಾರತ ಎರಡನೇ ಬಾರಿಗೆ ಏಷ್ಯನ್ ಗೇಮ್ಸ್ ಮಹಿಳಾ ಹಾಕಿ ಚಾಂಪಿಯನ್ ಆಗಿದೆ.

ಭಾರತಕ್ಕೆ ಶುಕ್ರವಾರ ಹಲವು ಕ್ರೀಡೆಗಳಲ್ಲಿ ಚಿನ್ನದ ಪದಕಗಳು ಒಲಿದಿದ್ದು, ದಿನದ ಅಂತ್ಯದ ವರದಿಗಳ ಪ್ರಕಾರ ಪದಕಗಳ ಸಂಖ್ಯೆ 76ಕ್ಕೆ ಏರಿದೆ. ಇದರಲ್ಲಿ 16 ಚಿನ್ನ, 25 ಬೆಳ್ಳಿ ಹಾಗೂ 35 ಕಂಚಿನ ಪದಕಗಳು ಸೇರಿದ್ದು, ಭಾರತ ಪದಕ ಪಟ್ಟಿಯಲ್ಲಿ ಐದನೇ ಸ್ಥಾನಕ್ಕೆ ಏರಿದೆ.

ಮಹಿಳಾ ಹಾಕಿ ತಂಡದ ಈ ಚಿನ್ನ ಕೇವಲ 44 ವರ್ಷಗಳ ಕಾಯುವಿಕೆಗೆ ತೆರೆ ಎಳೆದ ಸಾಧನೆಯಷ್ಟೇ ಅಲ್ಲ; ಲಾಸ್ ಏಂಜಲೀಸ್ ಒಲಿಂಪಿಕ್ಸ್‌ಗೆ ನೇರ ಪ್ರವೇಶವನ್ನೂ ಖಚಿತಪಡಿಸಿರುವುದರಿಂದ ಭಾರತೀಯ ಮಹಿಳಾ ಹಾಕಿಗೆ ಮಹತ್ವದ ಮೈಲಿಗಲ್ಲಾಗಿದೆ.

## ಕೇಂದ್ರ ಬರ ಅಧ್ಯಯನ ತಂಡದ ಭೇಟಿ ಹಿನ್ನೆಲೆ: ಜಿಲ್ಲಾಧಿಕಾರಿ ಪೂವಿತಾ ಎಸ್. ಪೂರ್ವಭಾವಿ ಪರಿಶೀಲನೆ

ರಾಯಚೂರು, ಅ.2: ಜಿಲ್ಲೆಗೆ ಅ.4ರಂದು ಕೇಂದ್ರ ಬರ ಅಧ್ಯಯನ ತಂಡ ಭೇಟಿ ನೀಡಿ ಬರ ಪರಿಸ್ಥಿತಿಯನ್ನು ಪರಿಶೀಲಿಸಲಿರುವ ಹಿನ್ನೆಲೆಯಲ್ಲಿ, ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಗುರುವಾರ ತಂಡದ ಭೇಟಿಗಾಗಿ ಆಯ್ಕೆ ಮಾಡಿರುವ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ ಪೂರ್ವಭಾವಿ ಪರಿಶೀಲನೆ ನಡೆಸಿದರು.



ಮುರ್ರಾನಪುರ, ಗಬ್ಬೂರು, ಎನ್. ಗಣೇಕಲ್, ಮಸರಕಲ್, ಯರಡೋಣ ಸೇರಿದಂತೆ ವಿವಿಧ ಸ್ಥಳಗಳಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಬರ ಪರಿಸ್ಥಿತಿ ಹಾಗೂ ತಂಡದ ಪರಿಶೀಲನೆಗೆ ಸಂಬಂಧಿಸಿದ ಸಿದ್ಧತೆಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು.

ಕೇಂದ್ರ ತಂಡದ ಭೇಟಿಯ ಸಂದರ್ಭದಲ್ಲಿ ಅಗತ್ಯ ಮಾಹಿತಿಯನ್ನು ಸಮರ್ಪಕವಾಗಿ ಒದಗಿಸುವುದರ ಜೊತೆಗೆ, ಬರದಿಂದ ಉಂಟಾಗಿರುವ ಪರಿಸ್ಥಿತಿಯನ್ನು ವಿವರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ್, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಅಹಮ್ಮದ್ ಅಲಿ, ದೇವದುರ್ಗ ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ, ಅರಕೇರಾ ತಹಶೀಲ್ದಾರ್ ಅಮರೇಶ ಬಿರಾದಾರ್, ಪಶುಸಂಗೋಪನಾ ಇಲಾಖೆಯ ಉಪನಿರ್ದೇಶಕ ಫೋಮ್ ಸಿಂಗ್, ದೇವದುರ್ಗ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ನಾಗೇಂದ್ರ, ಅರಕೇರಾ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಎಂ.ವೈ. ವಾಲ್ಮೀಕಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಜಲಜೀವನ್‌ಸ್ವಚ್ಛ ಭಾರತ್ ಮಿಷನ್ ಕಾಮಗಾರಿಗಳ ಗುಣಮಟ್ಟ ಕಾಯ್ದುಕೊಳ್ಳಲು ಸೂಚನೆ

ರಾಯಚೂರು, ಅ.1: ಜಿಲ್ಲೆಯ ಲಿಂಗಸುಗೂರು ಹಾಗೂ ದೇವದುರ್ಗ ತಾಲೂಕುಗಳಲ್ಲಿ ಜಲ ಜೀವನ್ ಮಿಷನ್ ಮತ್ತು ಸ್ವಚ್ಛ ಭಾರತ್ ಮಿಷನ್ ಯೋಜನೆಗಳಡಿ ಅನುಷ್ಠಾನಗೊಳ್ಳುತ್ತಿರುವ ವಿವಿಧ ಕಾಮಗಾರಿಗಳಿಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಆಯುಕ್ತೆ ಬಿ. ಫೌಜಿಯಾ ತರನ್ನುಮ್ ಭೇಟಿ ನೀಡಿ ಪ್ರಗತಿ ಹಾಗೂ ಗುಣಮಟ್ಟ ಪರಿಶೀಲಿಸಿದರು.



ಲಿಂಗಸುಗೂರು ತಾಲೂಕಿನ ಚಿತ್ತಾಪುರ ಗ್ರಾಮದಲ್ಲಿ ಸ್ವಚ್ಛ ಭಾರತ್ ಮಿಷನ್‌ನಡಿ ನಿರ್ಮಿಸಲಾಗುತ್ತಿರುವ ವೈಯಕ್ತಿಕ ಗೃಹ ಶೌಚಾಲಯಗಳನ್ನು ವೀಕ್ಷಿಸಿದ ಅವರು, ಕಾಮಗಾರಿಯ ಸ್ಥಿತಿಗತಿ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು. ನಂತರ ನೀರಲಕೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಡವಿಭಾವಿಯಲ್ಲಿ ನಿರ್ಮಾಣ ಹಂತದಲ್ಲಿರುವ ಜಲಧಾರೆ ಕುಡಿಯುವ ನೀರಿನ ಟ್ಯಾಂಕ್ ಪರಿಶೀಲಿಸಿ, ಗುಣಮಟ್ಟದಲ್ಲಿ ರಾಜಿಯಾಗದೆ ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸುವಂತೆ ಸೂಚಿಸಿದರು.

ಗುರುಗುಂಟ ಗ್ರಾಮದಲ್ಲಿರುವ ಘನ ತ್ಯಾಜ್ಯ ಹಾಗೂ ಮಲತ್ಯಾಜ್ಯ ವಿಲೇವಾರಿ ಘಟಕಗಳ ಕಾರ್ಯನಿರ್ವಹಣೆಯನ್ನು ವೀಕ್ಷಿಸಿದರು. ತ್ಯಾಜ್ಯ ನಿರ್ವಹಣೆಯಲ್ಲಿ ತೊಡಗಿರುವ ಸ್ವಸಹಾಯ ಸಂಘದ ಮಹಿಳೆಯರೊಂದಿಗೆ ಮಾತನಾಡಿ, ತ್ಯಾಜ್ಯ ಸಂಗ್ರಹಣೆ, ವಿಂಗಡಣೆ, ವಿಲೇವಾರಿ ಹಾಗೂ ಅವರಿಗೆ ಕಲ್ಪಿಸಿರುವ ಸುರಕ್ಷತಾ ಸೌಲಭ್ಯಗಳ ಕುರಿತು ಮಾಹಿತಿ ಪಡೆದರು. ತ್ಯಾಜ್ಯ ಸಾಗಣೆ ವಾಹನದಲ್ಲಿ ಕುಳಿತು ಕಾರ್ಯವಿಧಾನವನ್ನು ಖುದ್ದಾಗಿ ಪರಿಶೀಲಿಸಿದರು. ಇದೇ ವೇಳೆ ಸಸಿ ನೆಟ್ಟು ಪರಿಸರ ಸಂರಕ್ಷಣೆಯ ಸಂದೇಶ ನೀಡಿದರು.

ದೇವದುರ್ಗ ತಾಲೂಕಿನ ಜೇರಬಂಡಿ ಗ್ರಾಪಂ ವ್ಯಾಪ್ತಿಯ ಕಮದಾಳ ಗ್ರಾಮದಲ್ಲಿ ಜಲ ಜೀವನ್ ಮಿಷನ್

2ನೇ ಪುಟಕ್ಕೆ

## ಗಾಂಧೀಜಿಯವರ ಸತ್ಯಾಗ್ರಹ, ಅಹಿಂಸಾ ಮಾರ್ಗ ಇಂದಿಗೂ ಪ್ರಸ್ತುತ: ಜಿಲ್ಲಾಧಿಕಾರಿ ಪೂವಿತಾ ಎಸ್.

ರಾಯಚೂರು ಅಕ್ಟೋಬರ್ 02 (ಕರ್ನಾಟಕ ವಾರ್ತೆ): ನಗರದ ಜಿಲ್ಲಾ ಕ್ರೀಡಾಂಗಣದ ಹತ್ತಿರದಲ್ಲಿರುವ ಮಹಾತ್ಮಗಾಂಧಿ ಪುತ್ಥಳಿ ಬಳಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಮಹಾತ್ಮ ಗಾಂಧೀಜಿ ಅವರ 157ನೇ ಜಯಂತಿ ಆಚರಿಸಲಾಯಿತು.



ಈ ವೇಳೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಮಹಾತ್ಮ ಗಾಂಧೀಜಿ ಪುತ್ಥಳಿಗೆ ಮಾಲಾರ್ಪಣೆ ಮಾಡಿದ ನಂತರ ಮಾತನಾಡಿ, ಜೀವನದುದ್ದಕ್ಕೂ ಸತ್ಯಾಗ್ರಹ ಮತ್ತು ಅಹಿಂಸೆಯ ಮಾರ್ಗವನ್ನೇ ತಮ್ಮ ಬದುಕಿನ ಉದಾಹರಣೆಯಾಗಿ ತೋರಿಸಿಕೊಟ್ಟ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ತತ್ವಗಳು ಇಂದಿನ ಆಧುನಿಕ ಕಾಲದಲ್ಲೂ ಪ್ರಸ್ತುತವಾಗಿವೆ ಎಂದು ಹೇಳಿದರು.

ಹಲವಾರು ಕಠಿಣ ಹಾಗೂ ಹಿಂಸಾತ್ಮಕ ದಾರಿಗಳನ್ನು ಬಿಟ್ಟು, ಕೇವಲ ಸತ್ಯ ಮತ್ತು ಅಹಿಂಸೆಯ ಮಾರ್ಗದಲ್ಲಿ ನಡೆದರೆ ಮಾತ್ರ ನಮಗೆ ನಿಜವಾದ ಸ್ವಾತಂತ್ರ್ಯ ಹಾಗೂ ಶಾಂತಿ ಸಿಗಲು ಸಾಧ್ಯ ಎಂಬುದನ್ನು ಗಾಂಧೀಜಿಯವರು ತಮ್ಮ ಸ್ವಂತ ಬದುಕಿನ ಮೂಲಕ ಜಗತ್ತಿಗೆ ತೋರಿಸಿಕೊಟ್ಟಿದ್ದಾರೆ. ಅವರು ಬೋಧಿಸಿದ ಮಾರ್ಗದಲ್ಲೇ ನಡೆದು, ಇಡೀ ದೇಶದ ಜನರನ್ನು ಮುನ್ನಡೆಸಿ ನಮಗೆ ಸ್ವಾತಂತ್ರ್ಯ ತಂದುಕೊಟ್ಟ ಮಹಾನ್ ಚೇತನ ಮಹಾತ್ಮ ಗಾಂಧಿ ಅವರು ಆಗಿದ್ದಾರೆ ಎಂದರು.

ಇದಿನ ದಿನಗಳಲ್ಲೂ ಅವರ ಬದುಕು ಮತ್ತು ಬೋಧನೆಗಳು ನಮ್ಮ ದೇಶದ ಪ್ರತಿಯೊಬ್ಬ ಪ್ರಜೆಗೂ ಉತ್ತಮ ದಾರಿಯನ್ನು ತೋರಿಸುವ ದೊಡ್ಡ ಉದಾಹರಣೆಯಾಗಿವೆ. ಗಾಂಧೀಜಿಯವರು ತೋರಿಸಿದ ಸತ್ಯ ಹಾಗೂ ಅಹಿಂಸೆಯ ಮಾರ್ಗದಲ್ಲಿ ನಡೆಯುವುದೇ ನಾವು ಅವರಿಗೆ ಸಲ್ಲಿಸುವ ನಿಜವಾದ ಗೌರವವಾಗಿದೆ ಎಂದರು.

2ನೇ ಪುಟಕ್ಕೆ

## ಶಾಂತಿ, ಹೋರಾಟದ ಹಾದಿಯಲ್ಲಿ ದೇಶಕ್ಕೆ ಸ್ವಾತಂತ್ರ್ಯ: ಎನ್. ಶಂಕ್ರಪ್ಪ

ರಾಯಚೂರು: ದೇಶದ ಸ್ವಾತಂತ್ರ್ಯಕ್ಕಾಗಿ ಅನೇಕ ಮಹನೀಯರು ತ್ಯಾಗ, ಬಲಿದಾನ ಮಾಡಿದ್ದು, ಮಹಾತ್ಮ ಗಾಂಧೀಜಿ ಪ್ರತಿಪಾದಿಸಿದ ಶಾಂತಿ ಮತ್ತು ಅಹಿಂಸೆಯ ಹೋರಾಟವೂ ಸ್ವಾತಂತ್ರ್ಯ ಚಳವಳಿಯಲ್ಲಿ ಮಹತ್ವದ ಪಾತ್ರ ವಹಿಸಿದೆ ಎಂದು ಮಾಜಿ ವಿಧಾನ ಪರಿಷತ್ ಸದಸ್ಯ ಎನ್. ಶಂಕ್ರಪ್ಪ ಹೇಳಿದರು. ಎನ್. ಶಂಕ್ರಪ್ಪ ಅವರು ರಾಯಚೂರಿನ ಮಾಜಿ ವಿಧಾನ ಪರಿಷತ್ ಸದಸ್ಯರಾಗಿದ್ದುದನ್ನು ಹಿಂದಿನ ವರದಿಗಳೂ ದಾಖಲಿಸಿವೆ.




ನಗರದ ಬಿಜೆಪಿ ಕಚೇರಿಯಲ್ಲಿ ಗುರುವಾರ ಆಯೋಜಿಸಿದ್ದ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ದೇಶಕ್ಕಾಗಿ ಹಲವಾರು ಮಹನೀಯರು ತಮ್ಮ ಬದುಕನ್ನೇ ಸಮರ್ಪಿಸಿದ್ದು, ಅವರ ಹೋರಾಟ ಮತ್ತು ತ್ಯಾಗದ ಫಲವಾಗಿ ಸ್ವಾತಂತ್ರ್ಯ ದೊರೆಯಿತು. ದೇಶದಲ್ಲಿದ್ದ ಬಡತನ ಹಾಗೂ ಜನರ ಸಂಕಷ್ಟವನ್ನು ಕಂಡ ಗಾಂಧೀಜಿ ಸರಳ ಜೀವನವನ್ನು ಅಳವಡಿಸಿಕೊಂಡು, ಅಹಿಂಸೆ ಮತ್ತು ಶಾಂತಿಯ ಮಾರ್ಗದಲ್ಲಿ ಸ್ವಾತಂತ್ರ್ಯ ಹೋರಾಟವನ್ನು ಮುನ್ನಡೆಸಿದರು. ಅವರ ಸರಳತೆ, ತ್ಯಾಗ ಮತ್ತು ಆದರ್ಶಗಳು ಇಂದಿನ ಪೀಳಿಗೆಗೂ ಪ್ರೇರಣೆಯಾಗಿವೆ ಎಂದು ಹೇಳಿದರು.

ಲಾಲ್ ಬಹದ್ದೂರ್ ಶಾಸ್ತ್ರಿ ಅವರು ಸಾಮಾನ್ಯ ಕುಟುಂಬದ ಹಿನ್ನೆಲೆಯಿಂದ ಬೆಳೆದು, ಶಿಕ್ಷಣದೊಂದಿಗೆ ಪ್ರಾಮಾಣಿಕತೆ ಮತ್ತು ಸರಳತೆಯನ್ನು ಜೀವನದ ಮೌಲ್ಯಗಳನ್ನಾಗಿ ಮಾಡಿಕೊಂಡಿದ್ದರು. ಜವಾಹರಲಾಲ್ ನೆಹರು ಅವರ ನಿಧನದ ನಂತರ ಪ್ರಧಾನಿಯಾಗಿ ದೇಶದ ಜವಾಬ್ದಾರಿ

2ನೇ ಪುಟಕ್ಕೆ

## ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗಾಂಧೀಜಿ-ಶಾಸ್ತ್ರಿ ಜಯಂತಿ ಆಚರಣೆ

ರಾಯಚೂರು, ಅ.2: ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ 157ನೇ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ 122ನೇ ಜನ್ಮದಿನಾಚರಣೆಯನ್ನು ಶುಕ್ರವಾರ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಆಚರಿಸಲಾಯಿತು. ಉಭಯ ಮಹನೀಯರ ಭಾವಚಿತ್ರಗಳಿಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಲಾಯಿತು.




ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೆ. ಶಾಂತಪ್ಪ ಮಾತನಾಡಿ, ಗಾಂಧೀಜಿಯವರ ಸತ್ಯ, ಅಹಿಂಸೆ, ಸರಳತೆ ಹಾಗೂ ಶಾಂತಿಯ ಸಂದೇಶಗಳು ಇಂದಿಗೂ ಪ್ರಸ್ತುತವಾಗಿವೆ. ಸಮಾಜದಲ್ಲಿ ಸೌಹಾರ್ದತೆ ಮತ್ತು ಸಹಬಾಳ್ವೆ ಬೆಳೆಸಲು ಅವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಸರಳತೆ, ಪ್ರಾಮಾಣಿಕತೆ ಹಾಗೂ ದೃಢ ನಾಯಕತ್ವವನ್ನು ಸ್ಮರಿಸಿದ ಅವರು, ಜೈ ಜವಾನ್, ಜೈ ಕಿಸಾನ್ ಘೋಷಣೆಯ ಮೂಲಕ ಸೈನಿಕರು ಮತ್ತು ರೈತರ ಮಹತ್ವವನ್ನು ದೇಶಕ್ಕೆ ಸಾರಿದರು. ಯುವಜನತೆ ಹಾಗೂ ಕಾರ್ಯಕರ್ತರು ಈ ಮಹನೀಯರ ದೇಶಪ್ರೇಮ ಮತ್ತು ಸೇವಾ ಮನೋಭಾವವನ್ನು ಆದರ್ಶವಾಗಿಸಿಕೊಳ್ಳಬೇಕು ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಸಮಿತಿ ಕೋಶಾಧ್ಯಕ್ಷ ಜಯವಂತರಾವ್ ಪತಂಗೆ ಹಾಗೂ ದೇವದುರ್ಗ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿ ಶ್ರೀದೇವಿ ನಾಯಕ ಮಾತನಾಡಿ, ಸ್ವಾತಂತ್ರ್ಯ ಹೋರಾಟ ಮತ್ತು ರಾಷ್ಟ್ರ ನಿರ್ಮಾಣಕ್ಕೆ ಗಾಂಧೀಜಿ ಹಾಗೂ ಶಾಸ್ತ್ರಿ ನೀಡಿದ ಕೊಡುಗೆಯನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ ಹಾಗೂ ವಿಧಾನ ಪರಿಷತ್

2ನೇ ಪುಟಕ್ಕೆ

## ಸಂಚಾರ ನಿಯಮ ಪಾಲನೆಯೇ ಸುರಕ್ಷಿತ ಪ್ರಯಾಣದ ಮೊದಲ ಹೆಜ್ಜೆ

ರಾಯಚೂರು: ರಸ್ತೆ ಅಪಘಾತಗಳ ತಡೆ ಹಾಗೂ ಸುರಕ್ಷಿತ ವಾಹನ ಚಾಲನೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ನವೋದಯ ಎಫ್‌ಎಂ 88.4 ವತಿಯಿಂದ ಅ.3ರಂದು ವಿಶೇಷ ಮಾಹಿತಿ ಕಾರ್ಯಕ್ರಮ ಪ್ರಸಾರವಾಗಲಿದೆ.



ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಿ ರಸ್ತೆ ಸುರಕ್ಷತೆ, ಸಂಚಾರ ನಿಯಮಗಳ ಪಾಲನೆ ಹಾಗೂ ವಾಹನ ಸವಾರರು ವಹಿಸಬೇಕಾದ ಮುನ್ನೆಚ್ಚರಿಕೆಗಳ ಕುರಿತು ಮಾಹಿತಿ ನೀಡಲಿದ್ದಾರೆ.

ಅ.3ರಂದು ಬೆಳಿಗ್ಗೆ 10.30ಕ್ಕೆ ಪ್ರಸಾರವಾಗಲಿರುವ ಕಾರ್ಯಕ್ರಮದಲ್ಲಿ ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಪಾಲಿಸಬೇಕಾದ ನಿಯಮಗಳು, ಹೆಲ್ಮೆಟ್ ಬಳಕೆಯ ಅಗತ್ಯತೆ, ನಿಗದಿತ ವೇಗದ ಮಿತಿ ಪಾಲನೆ, ಸಂಚಾರ ಸಂಕೇತಗಳ ಮಹತ್ವ ಹಾಗೂ ಜವಾಬ್ದಾರಿಯುತ ವಾಹನ ಚಾಲನೆಯ ಕುರಿತು ವಿವರಿಸಲಾಗುವುದು.

ರಸ್ತೆ ಅಪಘಾತಗಳನ್ನು ಕಡಿಮೆ ಮಾಡುವಲ್ಲಿ

2ನೇ ಪುಟಕ್ಕೆ

## ಅ.4ರಂದು ಲಕ್ಷ್ಮಿದೇವಿ ಶಾಸ್ತ್ರಿಯವರ ಸಪ್ತ ಕೃತಿಗಳ ಲೋಕಾರ್ಪಣೆ

ರಾಯಚೂರು, ಅ.2: ಹಿರಿಯ ಸಾಹಿತಿ ಲಕ್ಷ್ಮಿದೇವಿ ಶಾಸ್ತ್ರಿ ಅವರ ಸಾಹಿತ್ಯ, ಸಂಶೋಧನೆ, ಜನಪದ ಹಾಗೂ ಸ್ಥಳೀಯ ಇತಿಹಾಸಕ್ಕೆ ಸಂಬಂಧಿಸಿದ ಏಳು ಕೃತಿಗಳ ಲೋಕಾರ್ಪಣೆ ಕಾರ್ಯಕ್ರಮ ಅ.4ರಂದು ಬೆಳಿಗ್ಗೆ 10.30ಕ್ಕೆ ನಗರದ ಕನ್ನಡ ಭವನದಲ್ಲಿ ನಡೆಯಲಿದೆ ಎಂದು ವಿಶ್ವನಾಥ ಶಾಸ್ತ್ರಿ ತಿಳಿಸಿದರು.



ಜಿಲ್ಲಾ ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಮತ್ತು ವಿಶ್ವ ಪ್ರಕಾಶನ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಸಚಿವ ಡಾ. ಅಮರೇಶ್ ಯತಗಲ್ ಕೃತಿಗಳನ್ನು ಲೋಕಾರ್ಪಣೆ ಮಾಡಲಿದ್ದು, ಹಿರಿಯ ಸಾಹಿತ್ಯ ವಿದ್ವಾಂಸ ಶಾಮಸುಂದರ ಬಿದರಕುಂದಿ ಉದ್ಘಾಟಿಸಲಿದ್ದಾರೆ.

ತುಂಗಭದ್ರೆಯ ಆಯುರ್ವೇದದಿಂದ ಆಕರ್ಷಿತರಾದ ದೇಶ-ವಿದೇಶಿಯರು, ರಾಯಚೂರು ಕೋಟೆಗೆ ನರಬಲಿಬಾಳೆ ಸಂಗಮ್ಮ ಮತ್ತು ಬಸರೆಡ್ಡಿ ಮಲ್ಲವ್ವ, ರಾಯಚೂರಿನ ಚಿತ್ರಕಲಾ ದಿಗ್ಗಜರು, ವಚನವಲ್ಲರಿ ಚುಟುಕುಗಳು, ಲಕ್ಷ್ಮೀದೇವಿ ಶಾಸ್ತ್ರಿಯವರ ಕಂಠದಲ್ಲುಳಿದ ಜನಪದಗಳು, ಸಂಶೋಧನಾ ಕೃಷಿಕ ದುರ್ಗಾ ಜಗದೀಶ್ ಹಾಗೂ ಕರ್ನಾಟಕ ಏಕೀಕರಣ ಹೋರಾಟಗಾರರ ವ್ಯಕ್ತಿಚಿತ್ರಮಾಲೆ ಪಂಡಿತ ತಾರಾನಾಥ ಕೃತಿಗಳು ಲೋಕಾರ್ಪಣೆಯಾಗಲಿವೆ.

ಜಿಲ್ಲಾ ಕಸಾಪ ಅಧ್ಯಕ್ಷ ರಂಗಣ್ಣ ಪಾಟೀಲ ಅಳ್ಳುಂಡಿ ಅಧ್ಯಕ್ಷತೆ ವಹಿಸಲಿದ್ದು, ಸಾಹಿತಿಗಳು, ಸಂಶೋಧಕರು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಭಾಗವಹಿಸಲಿದ್ದಾರೆ ಎಂದು ಸುದ್ದಿಗೋಷ್ಠಿಯಲ್ಲಿ

2ನೇ ಪುಟಕ್ಕೆ

## ಕೃಷಿ ವಿವಿಯಲ್ಲಿ ಗಾಂಧೀಜಿಶಾಸ್ತ್ರಿ ಜಯಂತಿ ಆಚರಣೆ



ರಾಯಚೂರು, ಅ.2: ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿಯನ್ನು ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು. ಗಣ್ಯರು ಉಭಯ ಮಹನೀಯರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಮಾಡಿ ಗೌರವ ಸಲ್ಲಿಸಿದರು.

ಕುಲಪತಿಗಳ ಅನುಪಸ್ಥಿತಿಯಲ್ಲಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಶೋಧನಾ ನಿರ್ದೇಶಕ ಡಾ. ಎ. ಪ್ರಭುರಾಜ್ ಮಾತನಾಡಿ, ಗಾಂಧೀಜಿಯವರ ಸತ್ಯ, ಅಹಿಂಸೆ ಮತ್ತು ಸ್ವಚ್ಛತೆಯ ತತ್ವಗಳು ಇಂದಿಗೂ ಪ್ರಸ್ತುತವಾಗಿವೆ. ಲಾಲ್ ಬಹದ್ದೂರ್ ಶಾಸ್ತ್ರಿಯವರ ಜೈ ಜವಾನ್, ಜೈ ಕಿಸಾನ್ ಸಂದೇಶ ಕೃಷಿ ಕ್ಷೇತ್ರದ ಮಹತ್ವವನ್ನು ಸಾರಿದ್ದು, ರೈತರು ಮತ್ತು ಸೈನಿಕರ ಕೊಡುಗೆಯನ್ನು ಸ್ಮರಿಸುವಂತೆ ಮಾಡುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಡೀನ್ (ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ) ಹಾಗೂ ಆಡಳಿತಾಧಿಕಾರಿ ಡಾ. ರಾಜಣ್ಣ, ಸ್ನಾತಕೋತ್ತರ ನಿರ್ದೇಶಕ ಡಾ. ಎ.ಜಿ. ಶ್ರೀನಿವಾಸ್, ಕೃಷಿ ಮಹಾವಿದ್ಯಾಲಯದ ಡೀನ್ ಡಾ. ಜಗಜೀವನ್ ರಾಮ್, ಗ್ರಂಥಪಾಲಕ ಹಾಗೂ ಎಸ್‌ಸಿ/ಎಸ್‌ಟಿ ಕೋಶದ ನಿರ್ದೇಶಕ ಡಾ. ಮಚೇಂದ್ರನಾಥ್ ಎಸ್., ಸಹ ಸಂಶೋಧನಾ ನಿರ್ದೇಶಕ ಡಾ. ಮಹಾದೇವ ಸ್ವಾಮಿ, ಆಸ್ತಿ ಅಧಿಕಾರಿ ಮೇಸ್ತ್ರ ಸೇರಿದಂತೆ ವಿಶ್ವವಿದ್ಯಾಲಯದ ಅಧಿಕಾರಿಗಳು, ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು

2ನೇ ಪುಟಕ್ಕೆ

## ಗಾಂಧೀಜಿ ಪುತಳಿಗೆ ಆರ್ಯವೈಶ್ಯ ಸಮಾಜದಿಂದ ಮಾಲಾರ್ಪಣೆ

ರಾಯಚೂರು: ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 157ನೇ ಜಯಂತಿ ಅಂಗವಾಗಿ ರಾಯಚೂರು ಆರ್ಯವೈಶ್ಯ ಸಮಾಜ ಶ್ರೀ ನಗರೇಶ್ವರ ದೇವಸ್ಥಾನ ಸಮಿತಿ ವತಿಯಿಂದ ನಗರದ ಮಹಾತ್ಮ ಗಾಂಧಿ ಕ್ರೀಡಾಂಗಣದ ಸಮೀಪದಲ್ಲಿರುವ ಗಾಂಧೀಜಿಯವರ ಪುತಳಿಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಲಾಯಿತು.




ಸಮಿತಿಯ ಪದಾಧಿಕಾರಿಗಳು ಹಾಗೂ ಸದಸ್ಯರು ಗಾಂಧೀಜಿಯವರ ಪುತಳಿಗೆ ಮಾಲಾರ್ಪಣೆ ಮಾಡಿ, ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಅವರು ನೀಡಿದ ಕೊಡುಗೆ ಹಾಗೂ ಸತ್ಯ, ಅಹಿಂಸೆ, ಶಾಂತಿ ಮತ್ತು ಸರಳತೆಯ ಸಂದೇಶಗಳನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ ಸಮಿತಿ ಅಧ್ಯಕ್ಷೆ ಸಾವಿತ್ರಿ ಪುರುಷೋತ್ತಮ, ಕಾರ್ಯದರ್ಶಿ ಸಿ. ಪದ್ಮರಾಜ್, ಉಪಾಧ್ಯಕ್ಷ ಇಲ್ಲೂರು ಗೋಪಾಲಯ್ಯ ಶೆಟ್ಟಿ, ಮುಖ್ಯ ಸಲಹೆಗಾರ ಮೈಲಾಪೂರು ಲಕ್ಷ್ಮೀನಾರಾಯಣ, ಕಾನೂನು ಸಲಹೆಗಾರ ಕೆ.ಸಿ. ವೀರೇಶ ವಕೀಲರು, ಸದಸ್ಯರಾದ ದೇವನಪಲ್ಲಿ ವೆಂಕಣ್ಣ ಶೆಟ್ಟಿ, ಅಂಬಾಟಿ ವೆಂಕಟರಾಜು, ಬ್ಯಾಗಿ ವೆಂಕಟೇಶ್, ಎಂ.ಆರ್. ಶ್ರೀನಿವಾಸ, ದೇವಗಾರಿ ಸತೀಶ್, ಅಳ್ಳುಂಡಿ ವೀರಯ್ಯ ಹಾಗೂ ನಾಮನಿರ್ದೇಶಿತ ಸದಸ್ಯರಾದ ಎಂ.ಬಿ.ಎನ್.ಆರ್. ಶ್ರೀನಿವಾಸ, ಎಂ.ಆರ್. ದತ್ತಾತ್ರೇಯ ಸೇರಿದಂತೆ ಹಲವರು ಉಪಸ್ಥಿತರಿದ್ದು ಗಾಂಧೀಜಿಯವರಿಗೆ ಗೌರವ ನಮನ ಸಲ್ಲಿಸಿದರು.

# ಸ್ವಾತಂತ್ರ್ಯದ ಜತೆಗೆ ಸಾಮಾಜಿಕ ಪರಿವರ್ತನೆಯೂ ಗಾಂಧೀಜಿ ಗುರಿಯಾಗಿತ್ತು: ಪ್ರೊ. ಶಿವಾನಂದ ಕೆಳಗಿನಮನಿ



ರಾಯಚೂರು, ಅ.2: ದೇಶದ ಸ್ವಾತಂತ್ರ್ಯದ ಜತೆಗೆ ಸಾಮಾಜಿಕ ಪರಿವರ್ತನೆಗೂ ಮಹಾತ್ಮ ಗಾಂಧೀಜಿ ಆದ್ಯತೆ ನೀಡಿದ್ದರು. ಸತ್ಯ, ಅಹಿಂಸೆ, ಸಮಾನತೆ ಹಾಗೂ ನೈತಿಕ ಜಾಗೃತಿಯ ಮೂಲಕ ಸಮಾಜದಲ್ಲಿ ಬದಲಾವಣೆ ತರಬೇಕೆಂಬುದು ಅವರ ಆಶಯವಾಗಿತ್ತು ಎಂದು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಿವಾನಂದ ಕೆಳಗಿನಮನಿ ಹೇಳಿದರು.

ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಆಯೋಜಿಸಿದ್ದ ಮಹಾತ್ಮ ಗಾಂಧೀಜಿಯವರ 157ನೇ ಜಯಂತಿ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಅಸ್ಪೃಶ್ಯತೆ ನಿವಾರಣೆ, ಮಹಿಳಾ ಸಬಲೀಕರಣ, ಗ್ರಾಮ ಸ್ವರಾಜ್ಯ, ಮೂಲ ಶಿಕ್ಷಣ ಹಾಗೂ ಸಮಾಜದ ಕಟ್ಟಕಡೆಯ ವ್ಯಕ್ತಿಯ ಸರ್ವಾಂಗೀಣ ಅಭಿವೃದ್ಧಿಗೆ ಗಾಂಧೀಜಿ ಒತ್ತು ನೀಡಿದ್ದರು. ಸ್ವಾತಂತ್ರ್ಯ ಹೋರಾಟದಲ್ಲಿ ಅಹಿಂಸಾತ್ಮಕ ಪ್ರತಿಭಟನೆ ಮತ್ತು ನಾಗರಿಕ ಅಸಹಕಾರವನ್ನು ಪರಿಣಾಮಕಾರಿ ಹೋರಾಟದ ಮಾರ್ಗಗಳನ್ನಾಗಿ ಬಳಸಿದರು. ಚಂಪಾರಣ ಸತ್ಯಾಗ್ರಹ, ಅಸಹಕಾರ ಚಳವಳಿ ಹಾಗೂ ಉಪ್ಪಿನ ಸತ್ಯಾಗ್ರಹ ಅವರ ಹೋರಾಟದ ಪ್ರಮುಖ ಘಟ್ಟಗಳಾಗಿವೆ ಎಂದರು.

ಚರಕವನ್ನು ಸ್ವದೇಶಿ, ಆರ್ಥಿಕ ಸ್ವಾವಲಂಬನೆ ಹಾಗೂ ಸ್ವಾತಂತ್ರ್ಯ ಹೋರಾಟದ ಸಂಕೇತವನ್ನಾಗಿ ಗಾಂಧೀಜಿ ರೂಪಿಸಿದರು. ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಗಾಂಧೀಜಿ ಸಾಮಾಜಿಕ ಸಮಾನತೆಗಾಗಿ ಶ್ರಮಿಸಿದ್ದರೂ ಅವರ ದೃಷ್ಟಿಕೋನ ಮತ್ತು ಮಾರ್ಗಗಳಲ್ಲಿ ಭಿನ್ನತೆಗಳಿದ್ದವು. ಸುಭಾಷ್ ಚಂದ್ರ ಬೋಸ್ ಅವರೊಂದಿಗೂ ಸೈದ್ಧಾಂತಿಕ ಭಿನ್ನಾಭಿಪ್ರಾಯಗಳಿದ್ದರೂ ಪರಸ್ಪರ ಗೌರವ ಹೊಂದಿದ್ದರು ಎಂದು ತಿಳಿಸಿದರು.

ಗಾಂಧೀಜಿಯವರ ಶಾಂತಿ ಮತ್ತು ಅಹಿಂಸೆಯ ಸಂದೇಶ ಭಾರತದ ಗಡಿಗಳನ್ನು ಮೀರಿ ಜಗತ್ತಿನ ವಿವಿಧ ನಾಗರಿಕ ಹಕ್ಕುಗಳ ಹೋರಾಟಗಳ ಮೇಲೂ ಪ್ರಭಾವ ಬೀರಿದೆ. ಅವರ ಸರಳತೆ, ಶಾಂತಿ ಮತ್ತು ಮಾನವೀಯ ಮೌಲ್ಯಗಳು ಮುಂದಿನ ಪೀಳಿಗೆಗೂ ಸ್ಫೂರ್ತಿಯಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮೌಲ್ಯಮಾಪನ ಕುಲಸಚಿವ ಪ್ರೊ. ಜ್ಯೋತಿ ಧಮ್ಮ ಪ್ರಕಾಶ್, ವಾಣಿಜ್ಯ ನಿಕಾಯದ ಡೀನ್ ಪ್ರೊ. ಪಿ. ಭಾಸ್ಕರ್, ಎನ್‌ಎಸ್‌ಎಸ್ ಸಂಯೋಜನಾಧಿಕಾರಿ ಡಾ. ಜಿ.ಎಸ್. ಬಿರಾದಾರ, ಬೋಧಕ-ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಇಂಗ್ಲಿಷ್ ವಿಭಾಗದ ಉಪನ್ಯಾಸಕ ಅನಿಲ್ ಅಪ್ರಾಳ್ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಗಾಂಧೀಜಿಶಾಸ್ತ್ರಿ ಆದರ್ಶಗಳು ಬದುಕಿಗೆ ಮಾರ್ಗದರ್ಶಿ: ಡಾ. ಆಲಿಸ್ ಇ. ಜೋಸೆಫ್



ರಾಯಚೂರು: ಡಾ. ನರಸಿಂಹಲು ನಂದಿನಿ ಸ್ಮಾರಕ ಶಿಕ್ಷಣ ಸಂಸ್ಥೆಯ ಸಂಚಾಲಿತ ನಂದಿನಿ ಪೂರ್ವ ಪ್ರಾಥಮಿಕ, ಪ್ರಾಥಮಿಕ, ಪ್ರೌಢಶಾಲೆ, ಪಿಯುಸಿ ಹಾಗೂ ನಂದಿನಿ ಶಿಕ್ಷಣ ಮಹಾವಿದ್ಯಾಲಯದ ಸಹಯೋಗದಲ್ಲಿ ಮಹಾತ್ಮ ಗಾಂಧೀಜಿ ಮತ್ತು ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿಯನ್ನು ರಾಂಪುರದ ನಂದಿನಿ ಶಿಕ್ಷಣ ಮಹಾವಿದ್ಯಾಲಯದ ಸಭಾಂಗಣದಲ್ಲಿ ಆಚರಿಸಲಾಯಿತು.

ಉಪಪ್ರಾಚಾರ್ಯ ಡಾ. ಬಿ. ವಿಜಯ ರಾಜೇಂದ್ರ ಪ್ರಾಸ್ತಾವಿಕವಾಗಿ ಮಾತನಾಡಿ, ಗಾಂಧೀಜಿಯವರ ಸತ್ಯ, ಅಹಿಂಸೆ ಮತ್ತು ಸತ್ಯಾಗ್ರಹದ ಹೋರಾಟವನ್ನು ವಿವರಿಸಿದರು. ದೈಹಿಕ ಹಾಗೂ ಮಾನಸಿಕ ಸಾಮರ್ಥ್ಯದೊಂದಿಗೆ ನೈತಿಕ ಮೌಲ್ಯಗಳನ್ನು ಬೆಳೆಸಿಕೊಳ್ಳುವುದು ಮುಖ್ಯ ಎಂದರು. ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಸರಳತೆ, ಧೈರ್ಯ, ಪ್ರಾಮಾಣಿಕತೆ ಹಾಗೂ ಜೈ ಜವಾನ್, ಜೈ ಕಿಸಾನ್ ಸಂದೇಶವನ್ನು ಸ್ಮರಿಸಿದರು.

ಅಧ್ಯಕ್ಷತೆ ವಹಿಸಿದ್ದ ಡಾ. ಆಲಿಸ್ ಇ. ಜೋಸೆಫ್ ಮಾತನಾಡಿ, ಗಾಂಧೀಜಿಯವರ ಸರಳತೆ, ಶಿಸ್ತು, ಸೌಹಾರ್ದತೆ, ತ್ಯಾಗ ಮತ್ತು ಅಹಿಂಸಾತ್ಮಕ ಹೋರಾಟ ದೇಶದ ಸ್ವಾತಂತ್ರ್ಯ ಚಳವಳಿಗೆ ಮಹತ್ವದ ದಿಕ್ಕು ನೀಡಿತು. ರಾಜಕೀಯ ಸ್ವಾತಂತ್ರ್ಯದೊಂದಿಗೆ ಸಾಮಾಜಿಕ ಸೌಹಾರ್ದತೆ ಮತ್ತು ಸರ್ವರ ಕಲ್ಯಾಣವೂ ಅವರ ಆಶಯವಾಗಿತ್ತು ಎಂದರು.

ಗಾಂಧೀಜಿ ಪ್ರತಿಪಾದಿಸಿದ ಮೂಲ ಶಿಕ್ಷಣದಲ್ಲಿ ಚಟುವಟಿಕೆ, ಪ್ರಾಯೋಗಿಕ ಕಲಿಕೆ ಹಾಗೂ ಸಮುದಾಯದ ಸಹಭಾಗಿತ್ವಕ್ಕೆ ಮಹತ್ವವಿತ್ತು. ಶಿಕ್ಷಣವು ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಬೆಳವಣಿಗೆಗೆ ಪೂರಕವಾಗಬೇಕು ಎಂದು ತಿಳಿಸಿದರು. ಶಾಸ್ತ್ರಿಯವರ ಸರಳತೆ, ಸಜ್ಜನಿಕೆ ಮತ್ತು ನಾಯಕತ್ವದ ಗುಣಗಳು ಇಂದಿನ ಪೀಳಿಗೆಗೆ ಮಾದರಿಯಾಗಿವೆ ಎಂದರು.

ಕಾರ್ಯಕ್ರಮದಲ್ಲಿ ವಿವಿಧ ನಂದಿನಿ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ಶೈಕ್ಷಣಿಕ ಸಲಹೆಗಾರ್ತಿ ರಾಜೇಶ್ವರಿ ಉಪಸ್ಥಿತರಿದ್ದರು. ಡಾ. ಬಿ. ವಿಜಯ ರಾಜೇಂದ್ರ ಕಾರ್ಯಕ್ರಮ ನಿರ್ವಹಿಸಿದರು.

# ಮಾನ್ವಿ ಪಬ್ಲಿಕ್ ಶಾಲೆಯಲ್ಲಿ ಗಾಂಧೀಜಿಶಾಸ್ತ್ರಿ ಜಯಂತಿ ಆಚರಣೆ



ಮಾನ್ವಿ: ನಗರದ ಚಿಕಲಪರ್ವಿ ರಸ್ತೆಯಲ್ಲಿರುವ ಮಾನ್ವಿ ಪಬ್ಲಿಕ್ ಶಾಲೆಯಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿಯನ್ನು ಗೌರವಪೂರ್ವಕವಾಗಿ ಆಚರಿಸಲಾಯಿತು.

ಶಾಲೆಯ ಕಾರ್ಯದರ್ಶಿ ಸೈಯದ್ ಮುಸ್ತಬ ಖಾದ್ರಿ ಅವರು ಗಾಂಧೀಜಿ ಹಾಗೂ ಶಾಸ್ತ್ರಿ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿದರು. ಬಳಿಕ ಮಾತನಾಡಿದ ಅವರು, ಗಾಂಧೀಜಿಯವರ ಸತ್ಯಾಗ್ರಹ ಮತ್ತು ಅಹಿಂಸಾ ತತ್ವಗಳು ಹಾಗೂ ಶಾಸ್ತ್ರಿಯವರ ದಿಟ್ಟ ನಿರ್ಧಾರ ಮತ್ತು ದೇಶಪ್ರೇಮ ಇಂದಿನ ಯುವ ಪೀಳಿಗೆಗೆ ಮಾರ್ಗದರ್ಶಿಯಾಗಿವೆ. ಇಬ್ಬರು ಮಹನೀಯರ ಆದರ್ಶ ಗುಣಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಖಾನ್ ಸಾಬ್, ಚಾಂದ್ ಪಾಷ, ಶಿಕ್ಷಕರಾದ ನರಸಿಂಹಮೂರ್ತಿ ದೇಸಾಯಿ, ಅಂಬಣ್ಣ ನಾಯಕ, ಮೋಹನ್ ಸಿಂಗ್, ಶಿಕ್ಷಕಿಯರಾದ ಸೌಮ್ಯ ಹಾಗೂ ನೇಹಾ ಸೇರಿದಂತೆ ಇತರರು ಉಪಸ್ಥಿತರಿದ್ದು ಗೌರವ ನಮನ ಸಲ್ಲಿಸಿದರು.

# ಗಾಂಧಿಶಾಸ್ತ್ರಿ ಜಯಂತಿ ಅಂಗವಾಗಿ ಗಬ್ಬೂರಿನಲ್ಲಿ ಕಾಲ್ನಡಿಗೆ ಜಾಥಾ



ಗಬ್ಬೂರು: ಭಾರತ್ ಸ್ಕೌಟ್ಸ್ ಮತ್ತು ಗೈಡ್ ಕರ್ನಾಟಕ ಜಿಲ್ಲಾ ಸಂಸ್ಥೆ ರಾಯಚೂರು, ಸ್ಥಳೀಯ ಸಂಸ್ಥೆ ದೇವದುರ್ಗ ಹಾಗೂ ವಿದ್ಯಾ ಜ್ಯೋತಿ ಶಾಲೆ ಗಬ್ಬೂರು ಸಂಯುಕ್ತಾಶ್ರಯದಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿ ಅಂಗವಾಗಿ ಕಾಲ್ನಡಿಗೆ ಜಾಥಾ ಹಾಗೂ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಶಾಲೆಯ ಅಧ್ಯಕ್ಷ ಚನ್ನಪ್ಪ ಬೂದಿನಾಳ ಹಾಗೂ ಕಾರ್ಯದರ್ಶಿ ವಾಣಿಶ್ರೀ ಬೂದಿನಾಳ ಹಸಿರು ನಿಶಾನೆ ತೋರಿಸುವ ಮೂಲಕ ಜಾಥಾಕ್ಕೆ ಚಾಲನೆ ನೀಡಿದರು. ಜಾಥಾದ ಬಳಿಕ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು ಗಬ್ಬೂರು ಬಸ್ ನಿಲ್ದಾಣದಲ್ಲಿ ಸ್ವಚ್ಛತಾ ಕಾರ್ಯ ನಡೆಸಿ ಸಾರ್ವಜನಿಕರಲ್ಲಿ ಸ್ವಚ್ಛತೆಯ ಕುರಿತು ಜಾಗೃತಿ ಮೂಡಿಸಿದರು.

ಕಾರ್ಯಕ್ರಮದಲ್ಲಿ ರಂಗನಾಥ ಸಿ., ಬೀರಪ್ಪ ಶಂಭೋಜಿ, ರಾಜಶ್ರೀ ಸಜ್ಜನ, ಜಿಲ್ಲಾ ತರಬೇತಿ ಆಯುಕ್ತರಾದ ನಾಗಭೂಷಣ ಮತ್ತು ಶಕುಂತಲಾ, ರಾಜ್ಯ ಪರಿಷತ್ ಸದಸ್ಯೆ ರಜನಿ ಡಿ., ಸಹಾಯಕ ಜಿಲ್ಲಾ ಆಯುಕ್ತ ಮಲ್ಲಪ್ಪ ಕುಂಬಾರ ಸೇರಿದಂತೆ ಸ್ಕೌಟ್ ಮಾಸ್ಟರ್‌ಗಳು, ಗೈಡ್ ಕ್ಯಾಪ್ಟನ್‌ಗಳು, ಸ್ಕೌಟ್ಸ್, ಗೈಡ್ಸ್, ರೋವರ್ಸ್ ಹಾಗೂ ರೇಂಜರ್ಸ್ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಜಿಲ್ಲಾ ಸಂಘಟಕ ಅಂಬಣ್ಣ ನಾಯಕ ಕಾರ್ಯಕ್ರಮವನ್ನು ಸಂಘಟಿಸಿದರು.

ಸಂಪರ್ಕಿಸಿ
ನಿಮ್ಮ ವಿಶ್ವಾಸ ಅರ್ಹ ಪತ್ರಿಕೆಯ
ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
98863 85685
tungabimba@gmail.com

ಅಮೃತ ವಾಣಿ
ಗ್ರಂಥಾಲಯವನ್ನು ಉಳಿಸೋಣ
ಜ್ಞಾನವನ್ನು ಬೆಳೆಸೋಣ.

1604ನೇ ದಿನಕ್ಕೆ
ಏಮ್ಸ್
ಹೋರಾಟ

# ಸಂಚಾರ ನಿಯಮ ಪಾಲನೆಯೇ ಸುರಕ್ಷಿತ ಪ್ರಯಾಣದ ಮೊದಲ ಹೆಜ್ಜೆ

ಪೊಲೀಸ್ ಇಲಾಖೆಯ ಕ್ರಮಗಳ ಜೊತೆಗೆ ಸಾರ್ವಜನಿಕರ ಸಹಕಾರ ಮತ್ತು ಜವಾಬ್ದಾರಿಯೂ ಪ್ರಮುಖವಾಗಿದ್ದು, ಪ್ರತಿಯೊಬ್ಬ ವಾಹನ ಸವಾರರು ಸಂಚಾರ ನಿಯಮಗಳನ್ನು ಪಾಲಿಸುವ ಮೂಲಕ ತಮ್ಮ ಹಾಗೂ ಇತರರ ಜೀವದ ಸುರಕ್ಷತೆಗೆ ಆದ್ಯತೆ ನೀಡಬೇಕೆಂಬ ಸಂದೇಶವನ್ನು ಕಾರ್ಯಕ್ರಮದ ಮೂಲಕ ತಲುಪಿಸಲಾಗುವುದು.

ಬೆಳಿಗ್ಗೆ ಪ್ರಸಾರವಾಗುವ ವಿಶೇಷ ಕಾರ್ಯಕ್ರಮವನ್ನು ಅದೇ ದಿನ ಸಂಜೆ 7.30ಕ್ಕೆ ಮರುಪ್ರಸಾರ ಮಾಡಲಾಗುವುದು. ಸಾರ್ವಜನಿಕರು ಕಾರ್ಯಕ್ರಮವನ್ನು ಆಲಿಸಿ ರಸ್ತೆ ಸುರಕ್ಷತಾ ನಿಯಮಗಳ ಕುರಿತು ಮಾಹಿತಿ ಪಡೆದು, ಅವುಗಳನ್ನು ದೈನಂದಿನ ಜೀವನದಲ್ಲಿ ಪಾಲಿಸುವಂತೆ ನವೋದಯ ಎಫ್‌ಎಂ ಕೇಂದ್ರದ ಮುಖ್ಯಸ್ಥ ಅಮರೇಶ ಆಶಿಯಾಳ ಮನವಿ ಮಾಡಿದ್ದಾರೆ.

ವಿಶೇಷ ಸಂದರ್ಶನದ ಸಂದರ್ಭದಲ್ಲಿ ಆಡಳಿತ ಮಂಡಳಿ ನಿರ್ದೇಶಕ ಡಾ. ಅಮೃತ್ ರಡ್ಡಿ, ನಿರ್ದೇಶಕರಾದ ಡಾ. ರಾಮೋಹನ್ ಗುಪ್ತ, ವಿಜಯ್ ಕುಮಾರ್, ಸುರೇಶ ಬಾಬು ಹಾಗೂ ನವೋದಯ ಎಫ್‌ಎಂ ಸಿಬ್ಬಂದಿ ಉಪಸ್ಥಿತರಿದ್ದರು.

# ಅ.4ರಂದು ಲಕ್ಷ್ಮಿದೇವಿ ಶಾಸ್ತ್ರಿಯವರ ಸಪ್ತ ಕೃತಿಗಳ ಲೋಕಾರ್ಪಣೆ

ತಿಳಿಸಲಾಯಿತು.

ಸುದ್ದಿಗೋಷ್ಠಿಯಲ್ಲಿ ಪ್ರತಿಭಾ ಗೋನಾಳ್, ದಂಡಪ್ಪ ಬಿರಾದಾರ್, ವೈಶಾಲಿ ಪಾಟೀಲ್, ಲಕ್ಷ್ಮಿದೇವಿ ಶಾಸ್ತ್ರಿ, ತಾಯಪ್ಪ ಹೊಸೂರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕೃಷಿ ವಿವಿಯಲ್ಲಿ ಗಾಂಧೀಜಿಶಾಸ್ತ್ರಿ ಜಯಂತಿ ಆಚರಣೆ

ಉಪಸ್ಥಿತರಿದ್ದರು.

ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ನಿರ್ದೇಶನಾಲಯ ಕಾರ್ಯಕ್ರಮ ಆಯೋಜಿಸಿತ್ತು. ಮುಖ್ಯ ಕೃಷಿ ಸಂಶೋಧನಾ ಕೇಂದ್ರದ ಹಿರಿಯ ಕ್ಷೇತ್ರ ಅಧೀಕ್ಷಕ ಡಾ. ಸಂಗಣ್ಣ ಸಜ್ಜನ್ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ಮೊದಲನೇ ಪುಟದಿಂದ

# ಜಲಜೀವನ್‌ಸ್ವಚ್ಛ ಭಾರತ್ ಮಿಷನ್ ಕಾಮಗಾರಿಗಳ ಗುಣಮಟ್ಟ ಕಾಯ್ದುಕೊಳ್ಳಲು ಸೂಚನೆ

ಕಾಮಗಾರಿಗಳನ್ನು ವೀಕ್ಷಿಸಿ, ಗ್ರಾಮಸ್ಥರಿಗೆ ಸಮರ್ಪಕ ಹಾಗೂ ನಿರಂತರ ಕುಡಿಯುವ ನೀರು ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಗ್ರಾಮಸ್ಥರೊಂದಿಗೆ ಸಂವಾದ ನಡೆಸಿ ನೀರು ಪೂರೈಕೆಗೆ ಸಂಬಂಧಿಸಿದ ಸಮಸ್ಯೆಗಳನ್ನೂ ಆಲಿಸಿದರು.

ಮಸರಕಲ್ ಗ್ರಾಮದ ಶಕ್ತಿ ಕೇಂದ್ರಕ್ಕೆ ಭೇಟಿ ನೀಡಿ ರಾಗಿ, ಗೋಧಿ, ಹೆಸರುಕಾಳು ಹಾಗೂ ನ್ಯೂಟ್ರಿಮಿಕ್ಸ್ ಸೇರಿದಂತೆ ಪೌಷ್ಟಿಕ ಆಹಾರ ಪದಾರ್ಥಗಳ ತಯಾರಿಕೆ, ಗುಣಮಟ್ಟ ಮತ್ತು ವಿತರಣಾ ವ್ಯವಸ್ಥೆಯನ್ನು ಪರಿಶೀಲಿಸಿದರು. ಆಹಾರದ ಗುಣಮಟ್ಟ ಕಾಪಾಡಿ ಅಗತ್ಯವಿರುವ ಗ್ರಾಮಗಳಿಗೆ ಸಕಾಲದಲ್ಲಿ ಸರಬರಾಜು ಮಾಡುವಂತೆ ತಿಳಿಸಿದರು.

ನಂತರ ಜಿಲ್ಲಾ ಪಂಚಾಯಿತಿ ಆವರಣದಲ್ಲಿರುವ ಎನ್‌ಆರ್‌ಎಲ್‌ಎಂನ ಅಕ್ಕ ಕೆಫೆಗೆ ಭೇಟಿ ನೀಡಿ, ಅದನ್ನು ನಿರ್ವಹಿಸುತ್ತಿರುವ ಸ್ವಸಹಾಯ ಗುಂಪಿನ ಮಹಿಳೆಯರೊಂದಿಗೆ ಚರ್ಚಿಸಿದರು. ಗ್ರಾಹಕರಿಗೆ ಶುಚಿ, ರುಚಿಕರ ಹಾಗೂ ಗುಣಮಟ್ಟದ ಆಹಾರ ಒದಗಿಸುವಂತೆ ಸಲಹೆ ನೀಡಿದರು.

ಬಳಿಕ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಲ ಜೀವನ್ ಮಿಷನ್ ಹಾಗೂ ಸ್ವಚ್ಛ ಭಾರತ್ ಮಿಷನ್ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಬಾಕಿ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕಾಂದೂ, ಯೋಜನಾ ನಿರ್ದೇಶಕ ಶರಣಬಸವರಾಜ, ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ, ಕಾರ್ಯಪಾಲಕ ಅಭಿಯಂತರ ದೊರೆಸ್ವಾಮಿ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಗಾಂಧೀಜಿಯವರ ಸತ್ಯಾಗ್ರಹ, ಅಹಿಂಸಾ ಮಾರ್ಗ ಇಂದಿಗೂ ಪ್ರಸ್ತುತ: ಜಿಲ್ಲಾಧಿಕಾರಿ ಪೂವಿತಾ ಎಸ್.

ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹೊಪಾತ್ರ ಅವರು ಮಾತನಾಡಿ, ಇಡೀ ಜಗತ್ತಿನಲ್ಲಿ ಯಾವುದೇ ಆಯುಧ, ಬಂದೂಕು ಅಥವಾ ಕತ್ತಿ ಇಲ್ಲದೆ ಬ್ರಿಟಿಷರ ದೊಡ್ಡ ಸಾಮ್ರಾಜ್ಯವನ್ನು ಅಹಿಂಸೆ ಮೂಲಕ ಎದುರಿಸಿ, ಓಡಿಸಿದ ಕೀರ್ತಿ ನಮ್ಮ ಮಹಾತ್ಮ ಗಾಂಧೀಜಿಯವರಿಗೆ ಸಲ್ಲುತ್ತದೆ. ವಿಶ್ವದ 150ಕ್ಕಿಂತ ಹೆಚ್ಚು ದೇಶಗಳಲ್ಲಿ ರಾಷ್ಟಪಿತ ಗಾಂಧೀಜಿಯವರ ಪ್ರತಿಮೆಗಳನ್ನು ಸ್ಥಾಪಿಸಿ, ಪೂಜಿಸಲಾಗುತ್ತದೆ. ನೆಲ್ಸನ್ ಮಂಡೇಲಾ ಮತ್ತು ಮಾರ್ಟಿನ್ ಲೂಥರ್ ಕಿಂಗ್ ಅವರಂತಹ ಮಹಾನ್ ನಾಯಕರಿಗೂ ಗಾಂಧೀಜಿಯೇ ಆದರ್ಶರಾಗಿದ್ದರು ಎಂದರು.

ಗಾಧೀಜಿ ಪ್ರಕಾರ ಅಹಿಂಸೆ ಎಂದರೆ ಕೇವಲ ಮುಟ್ಟದಿರುವುದಲ್ಲ, ಬದಲಾಗಿ ನ್ಯಾಯ ಒಬ್ಬ ಅಧಿಕಾರಿಯಾಗಿ ತಡವಾಗಿ ಫೈಲ್ ವಿಲೇವಾರಿ ಮಾಡುವುದು ಕೂಡ ಹಿಂಸೆಯೇ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಪ್ಲಾಸ್ಟಿಕ್ ಪ್ಯಾಕೆಟ್ ತಿಂದು ಚರಂಡಿಗೆ ಹಾಕಿ, ಅದನ್ನು ಪಾಲಿಕೆ ಅಥವಾ ಪೌರಕಾರ್ಮಿಕರು ಬಂದು ಸ್ವಚ್ಛಗೊಳಿಸಬೇಕು ಎಂದು ಅಪೇಕ್ಷಿಸುವುದೂ ಕೂಡ ಹಿಂಸೆಯೇ. ಏಕೆಂದರೆ ಇದರಿಂದ ಪರಿಸರ ಹಾಗೂ ಮೂಕ ಜೀವಿಗಳಿಗೆ ಹಾನಿಯಾಗುತ್ತದೆ ಎಂದರು.

ಗಾಧೀಜಿಯವರ ಅಹಿಂಸೆಯ ಪರಿಕಲ್ಪನೆ ಅರ್ಥವಾಗಲು ಅವರ ಆತ್ಮಕಥನ 'ಮೈ ಎಕ್ಸ್‌ಪೆರಿಮೆಂಟ್ಸ್ ವಿತ್ ಟ್ರುತ್' (ಸತ್ಯದೊಂದಿಗೆ ನನ್ನ ಪ್ರಯೋಗಗಳು), ಸತ್ಯಾಗ್ರಹ ಮತ್ತು ಹಿಂದ್ ಸ್ವರಾಜ್ ಪುಸ್ತಕಗಳನ್ನು ಪ್ರತಿಯೊಬ್ಬರೂ ಓದಿ ಅರ್ಥೈಸಿಕೊಳ್ಳಬೇಕು. ಅವರಿಗೆ ಇಂದು ಕೇವಲ ಮಾಲಾರ್ಪಣೆ ಮಾಡುವುದಷ್ಟೇ ಅಲ್ಲದೆ, ಅವರ ತತ್ವ ಮತ್ತು ಮೌಲ್ಯಗಳನ್ನು ನಮ್ಮ ಜೀವನ ಹಾಗೂ ಕೆಲಸದಲ್ಲಿ ಅಳವಡಿಸಿಕೊಂಡು ನ್ಯಾಯಯುತವಾಗಿ ಕರ್ತವ್ಯ ನಿರ್ವಹಿಸಿದಾಗ ಮಾತ್ರ ಸಮಾಜದ ಪ್ರಗತಿ ಸಾಧ್ಯ ಎಂದರು.

ಪುಸ್ತಕ ಬಿಡುಗಡೆ: ಮಹಾತ್ಮ ಗಾಂಧೀಜಿ ಅವರ 157ನೇ ಜಯಂತಿಯ ಅಂಗವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಹೊರತಂದ ಗಾಂಧಿ ದರ್ಶನ ಜನಪದ ಹಾಗೂ ಮಾರ್ಚ್ ಆಫ್ ಕರ್ನಾಟಕದ ವಿಶೇಷ ಸಂಚಿಕೆಗಳನ್ನು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಸೇರಿದಂತೆ ವಿವಿಧ ಗಣ್ಯರಿಂದ ಬಿಡುಗಡೆ ಮಾಡಲಾಯಿತು.

ಸರ್ವಧರ್ಮ ಪ್ರಾರ್ಥನೆ: ಕಾರ್ಯಕ್ರಮದಲ್ಲಿ ಹಿಂದೂ ಧರ್ಮ ಕುರಿತು ಪ್ರವಚನ ನೀಡಿದ ಲಕ್ಷ್ಮಿದೇವಿ, ಗೀತೆಯ ಸಾರಾಂಶವನ್ನು ತಿಳಿಸುತ್ತ, ಮಹಾತ್ಮ ಗಾಂಧಿ ಅವರು ಸತ್ಯ ಶೋಧನೆಯಲ್ಲಿ ನಿರತರಾಗಿ ಸಾಮಾಜಿಕ ಸೇವೆಯಲ್ಲಿ ತೊಡಗಿಸಿಕೊಂಡು ಸಮಸ್ಯೆಗಳ ಪರಿಹಾರಕ್ಕೆ ಗೀತೆ ಮೊರೆ ಹೋಗುತ್ತಾರೆ. ರಾಮನಾಮ ಜಪಿಸುತ್ತಿದ್ದರು. ಗಾಂಧಿ ಅವರು ಕೊನೆಯುಸಿರೆಳೆಯುವಾಗ ಹೇ ರಾಮ ಎಂದು ಉದ್ಘಾರ ಮಾಡಿರುವುದನ್ನು ಕೇಳಿ ತಿಳಿದ್ದಿದ್ದೇವೆ ಎಂದರು.

ಇಸ್ಲಾ ಧರ್ಮದ ಕುರಿತು ನೇಮತುಲ್ಲ ಪ್ರವಚನ ನೀಡಿ, ಕುರಾನ್ ಪಠಣ ಮಾಡಿ ಅದರ ಅರ್ಥವನ್ನು ತಿಳಿಸಿದರು. ವಿಶ್ವಕ್ಕೆ ಶಾಂತಿ ಸಾರಿದ ಗಾಂಧೀಜಿ ಅವರ ತತ್ವ, ಸಿದ್ಧಾಂತಗಳು ಎಲ್ಲರಿಗೂ ದಾರಿದೀಪವಾಗಿವೆ ಎಂದರು.

ಕ್ರಿಶ್ಚಿಯನ್ ಧರ್ಮದ ಕುರಿತು ಸುಮನ್ ಸುನೈನ ಉಪನ್ಯಾಸ ನೀಡಿ, ಬೈಬಲ್‌ನಲ್ಲಿ ಹೇಳಿರುವ ಸಾರಾಂಶಗಳನ್ನು ತಿಳಿಸಿದರು. ಅಹಿಂಸೆಯಿದ ಒಳ್ಳೆಯದನ್ನು ಸಾಧಿಸಬಹುದು ಎಂಬುದನ್ನು ಮಹಾತ್ಮ ಗಾಂಧಿ ಅವರು ಹೇಳಿದಂತೆ ನಡೆಯುವ ಮೂಲಕ ತೋರಿಸಿಕೊಟ್ಟಿದ್ದಾರೆ. ಶಾಂತಿಯಿದ ಸಮಾಜ ಕಟ್ಟಲು ಸಾಧ್ಯ ಎಂಬುದನ್ನು ಸಾಬೀತುಪಡಿಸಿದ್ದಾರೆ ಎಂದು ತಿಳಿಸಿದರು.

ಬೌದ್ಧ ಧರ್ಮದ ಕುರಿತು ಉಪನ್ಯಾಸ ನೀಡಿದ ವಿದ್ಯಾಸಾಗರ್, ಜೀವನದಲ್ಲಿ ಶಿಸ್ತು ಅಳವಡಿಸಿಕೊಳ್ಳಬೇಕು. ಗುರು, ಹಿರಿಯರನ್ನು ಗೌರವಿಸಬೇಕು. ತಂದೆ-ತಾಯಿ ಸೇವೆ ಮಾಡುವುದನ್ನು ಮೈಗೂಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಜೈನ್ ಧರ್ಮದ ಕುರಿತು ಉಪನ್ಯಾಸ ನೀಡಿದ ನಾಗಶ್ರೀ, ಪ್ರಾಚೀನ ಗ್ರಂಥದ ಬಗ್ಗೆ ವಿವರಿಸಿದರು. ಅಹಿಂಸೆ ಮಾರ್ಗದಲ್ಲಿ ಸ್ವಾತಂತ್ರ್ಯ ತಂದುಕೊಟ್ಟ ಮಹಾತ್ಮ ಗಾಂಧಿ ಅವರ ಮಾರ್ಗವನ್ನು ಎಲ್ಲರು ಅನುಸರಿಸಬೇಕು. ಮಕ್ಕಳಲ್ಲಿ ದೇಶಾಭಿಮಾನ ಬೆಳೆಸಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ರಾಯಚೂರು ಮಹಾನಗರ ಪಾಲಿಕೆ ಆಡಳಿತ ವಿಭಾಗದ ಉಪ ಆಯುಕ್ತರಾದ ಶರಣಪ್ಪ, ಮುರಳಿಧರ್ ರಾವ್, ಕಂದಾಯ ವಿಭಾಗದ ಉಪ ಆಯುಕ್ತೆ ಸಂತೋಷ ರಾಣಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಡಾ.ಜಿ.ಸುರೇಶ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೃಷ್ಣ ಶಾವಂತಗೇರಾ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿರೇಶ ನಾಯಕ, ರಾಯಚೂರು ಮಹಾನಗರ ಪಾಲಿಕೆಯ ಸಮುದಾಯ ಸಂಘಟನಾಧಿಕಾರಿ ಕೃಷ್ಣ ಕಟ್ಟಿಮನಿ, ಹಿರಿಯ ಪತ್ರಕರ್ತರರಾದ ಪಿ.ಚನ್ನಬಸವ, ಖಾನ್ ಸಾಬ್ ಮೋಮಿನ್, ವಾರ್ತಾ ಇಲಾಖೆಯ ಸಿಬ್ಬಂದಿಗಳಾದ ನರೇಶ, ರಮೇಶ ಗೌಡೂರು, ಅಬ್ಬಾಸ್ ಖಾನ್, ವೆಂಕಟೇಶ, ಅಂಬೇಡ್ಕರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು, ಸೇವದಳ, ಎನ್‌ಸಿಸಿ, ಸ್ಕೌಟ್ಸ್ ಗೈಡ್ಸ್ ವಿದ್ಯಾರ್ಥಿಗಳು ಇದ್ದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸಹ ಕಾರ್ಯದರ್ಶಿ ಡಾ. ದಂಡಪ್ಪ ಬಿರಾದಾರ ಅವರು ಕಾರ್ಯಕ್ರಮವನ್ನು ನಿರೂಪಿಸಿದರು.

# ಶಾಂತಿ, ಹೋರಾಟದ ಹಾದಿಯಲ್ಲಿ ದೇಶಕ್ಕೆ ಸ್ವಾತಂತ್ರ್ಯ: ಎನ್. ಶಂಕ್ರಪ್ಪ

ವಹಿಸಿಕೊಂಡ ಶಾಸ್ತ್ರಿ ಅವರು ಅಲ್ಪಾವಧಿಯಲ್ಲಿಯೇ ತಮ್ಮ ಆಡಳಿತದ ಮೂಲಕ ವಿಶಿಷ್ಟ ಛಾಪು ಮೂಡಿಸಿದರು ಎಂದು ಶಂಕ್ರಪ್ಪ ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ನಗರ ಮಂಡಲ ಉಪಾಧ್ಯಕ್ಷ ಪಲುಗುಲ ನಾಗರಾಜ ಹಾಗೂ ಲಿಂಗಾರೆಡ್ಡಿ ಹೊಸೂರು ಅವರು ಗಾಂಧೀಜಿ ಮತ್ತು ಶಾಸ್ತ್ರಿ ಅವರ ಜೀವನ, ಆದರ್ಶ ಹಾಗೂ ದೇಶಕ್ಕೆ ನೀಡಿದ ಕೊಡುಗೆಗಳನ್ನು ಸ್ಮರಿಸಿ ಮಾತನಾಡಿದರು. ಇದಕ್ಕೂ ಮುನ್ನ ಉಭಯ ನಾಯಕರ ಭಾವಚಿತ್ರಗಳಿಗೆ ಪುಷ್ಪ ನಮನ ಸಲ್ಲಿಸಲಾಯಿತು.

ಬಿಜೆಪಿ ರಾಜ್ಯ ಸಮಿತಿ ಸದಸ್ಯ ರಾಜಕುಮಾರ, ನಗರ ಮಂಡಲ ಅಧ್ಯಕ್ಷ ಊಟ್ಕೂರು ರಾಘವೇಂದ್ರ, ಜಿಲ್ಲಾ ಉಪಾಧ್ಯಕ್ಷ ಟಿ. ಶ್ರೀನಿವಾಸ ರೆಡ್ಡಿ, ಬಿ. ಗೋವಿಂದ, ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ವಿಜಯ ರಾಜೇಶ್ವರಿ ಗೋಪಶೆಟ್ಟಿ, ಹಿರಿಯ ಮುಖಂಡರಾದ ವೈ. ಗೋಪಾಲ ರೆಡ್ಡಿ, ಜಿ. ಶಂಕರ ರೆಡ್ಡಿ, ಬಂಡೇಶ ವಲ್ಕಂದಿನ್ನಿ, ಮಂಚಾಲ ಭೀಮಯ್ಯ, ಯು. ನರಸರೆಡ್ಡಿ, ಕೊಟ್ರೇಶಪ್ಪ ಕೋರಿ, ವಿಜ್ಞಾನ ವೆಂಕಟೇಶ, ವಿಶ್ವನಾಥ ರೆಡ್ಡಿ, ಶಿವಕುಮಾರ ಪೊಲೀಸ್ ಪಾಟೀಲ, ಮಂಡಲ ಪ್ರಧಾನ ಕಾರ್ಯದರ್ಶಿ ಜೆ.ಎಂ. ಮೌನೇಶ ಸೇರಿದಂತೆ ಪಕ್ಷದ ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗಾಂಧೀಜಿ-ಶಾಸ್ತ್ರಿ ಜಯಂತಿ ಆಚರಣೆ

ಸದಸ್ಯ ಎ. ವಸಂತಕುಮಾರ, ಜಿ. ಶಿವಮೂರ್ತಿ, ಅಮರೇಗೌಡ ಹಂಚಿನಾಳ, ರುದ್ರಪ್ಪ ಅಂಗಡಿ, ತಾಯಣ್ಣ ನಾಯಕ, ರವಿ ಪಾಟೀಲ್, ಎನ್. ಶ್ರೀನಿವಾಸ ರೆಡ್ಡಿ, ಸುಧೀಂದ್ರ ಜಾಹಗೀರದಾರ, ಬಸವರಾಜ ಪಾಟೀಲ್ ಅತ್ತನೂರು, ರಮೇಶ ಯಾದವ, ಸೈಯದ್ ಫಯಾಜುದ್ದೀನ್, ರಾಣಿ ರಿಚರ್ಡ್, ಶಶಿಕಲಾ ಭೀಮರಾಯ, ಆರತಿ ಚಂದ್ರಶೇಖರ ಸೇರಿದಂತೆ ಪಕ್ಷದ ಮುಖಂಡರು, ಮಹಿಳಾ ಹಾಗೂ ವಿವಿಧ ಘಟಕಗಳ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ಜಾಗೀರ ನಂದಿಹಾಳದಲ್ಲಿ ಉಚಿತ ಆರೋಗ್ಯ ಶಿಬಿರ



ಲಿಂಗಸುಗೂರು: ತಾಲೂಕಿನ ಜಾಗೀರ ನಂದಿಹಾಳ ಗ್ರಾಮದಲ್ಲಿ ಗಾಂಧಿ ಜಯಂತಿ ಅಂಗವಾಗಿ ಅಜೀಂ ಪ್ರೇಮ್‌ಜಿ ಫೌಂಡೇಶನ್ ಸಹಕಾರದೊಂದಿಗೆ ಸಂಗೊಳ್ಳಿ ರಾಯಣ್ಣ ಯುವಕರ ಸಂಘದ ವತಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಯಿತು.

ಶಿಬಿರವನ್ನು ಡಾ. ನೀಲಕಂಠ ರೋಡಲಬಂಡಾ ಉದ್ಘಾಟಿಸಿದರು. ವಿವಿಧ ಆರೋಗ್ಯ ಸಮಸ್ಯೆಗಳೊಂದಿಗೆ ಆಗಮಿಸಿದ್ದ ಗ್ರಾಮಸ್ಥರನ್ನು ವೈದ್ಯರು ತಪಾಸಣೆ ನಡೆಸಿ ಅಗತ್ಯ ಸಲಹೆ ನೀಡಿದರು. ಕಣ್ಣಿನ ಸಮಸ್ಯೆ, ಸಾಮಾನ್ಯ ಆರೋಗ್ಯ ಸಮಸ್ಯೆಗಳು, ಅಲರ್ಜಿ ಹಾಗೂ ಮಂಡಿನೋವಿನಿಂದ ಬಳಲುತ್ತಿದ್ದವರನ್ನು ಪರೀಕ್ಷಿಸಲಾಯಿತು.

ಈ ಸಂದರ್ಭದಲ್ಲಿ ವೈದ್ಯರಾದ ಡಾ. ಕಿಶೋರ್, ಡಾ. ಬಸವರಾಜ, ಡಾ. ರಂಗನಾಥ, ಫೌಂಡೇಶನ್‌ನ ಅರುಣ್, ಸುರೇಶ್, ಮೇಘನಾ, ಪ್ರಿಯಾಂಕಾ, ರೈತ ಸಂಘದ ಜಿಲ್ಲಾಧ್ಯಕ್ಷ ಶಿವಪುತ್ರಗೌಡ ನಂದಿಹಾಳ, ಜಿ. ಆದನಗೌಡ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ಗಾಂಧೀಜಿಶಾಸ್ತ್ರಿ ಆದರ್ಶಗಳು ಇಂದಿಗೂ ದಾರಿದೀಪ: ಜಿ.ಕೆ. ನಾಗರಾಜ



ಕಲ್ಮಲಾ: ಇಲ್ಲಿನ ಜನತಾ ಕಾಲೋನಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿಯನ್ನು ಗೌರವಪೂರ್ವಕವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಅತಿಥಿ ಶಿಕ್ಷಕರ ಸಂಘದ ಅಧ್ಯಕ್ಷ ಜಿ.ಕೆ. ನಾಗರಾಜ ಮಾತನಾಡಿ, ಮಹಾತ್ಮ ಗಾಂಧೀಜಿ ತಮ್ಮ ಜೀವನದುದ್ದಕ್ಕೂ ಸತ್ಯ ಮತ್ತು ಅಹಿಂಸೆಯ ಮಾರ್ಗವನ್ನು ಅನುಸರಿಸಿ ಇಡೀ ಜಗತ್ತಿಗೆ ಮಾದರಿಯಾದರು. ಅನ್ಯಾಯವನ್ನು ವಿರೋಧಿಸಲು ದ್ವೇಷ ಅಥವಾ ಹಿಂಸೆಯ ಅಗತ್ಯವಿಲ್ಲ ಎಂಬುದನ್ನು ತಮ್ಮ ಹೋರಾಟಗಳ ಮೂಲಕ ತೋರಿಸಿಕೊಟ್ಟರು ಎಂದರು.

ಚಂಪಾರಣ್ಯ ಸತ್ಯಾಗ್ರಹ, ಉಪ್ಪಿನ ಸತ್ಯಾಗ್ರಹ, ದಂಡಿ ಯಾತ್ರೆ ಸೇರಿದಂತೆ ಹಲವು ಚಳವಳಿಗಳ ಮೂಲಕ ಜನರನ್ನು ಸಂಘಟಿಸಿದ ಗಾಂಧೀಜಿ, ಸತ್ಯ ಮತ್ತು ಅಹಿಂಸೆಯನ್ನು ಅಸ್ತ್ರವಾಗಿಸಿಕೊಂಡು ಬ್ರಿಟಿಷರ ವಿರುದ್ಧ ಹೋರಾಟ ನಡೆಸಿದರು. ಆತ್ಮಗೌರವದೊಂದಿಗೆ ಬದುಕುವುದು ಹಾಗೂ ಶಾಂತಿಯ ಮಾರ್ಗದಲ್ಲಿ ಅನ್ಯಾಯವನ್ನು ಎದುರಿಸುವುದು ಅವರ ಜೀವನ ಸಂದೇಶವಾಗಿತ್ತು ಎಂದು ಹೇಳಿದರು.

ಲಾಲ್ ಬಹದ್ದೂರ್ ಶಾಸ್ತ್ರಿ ಅವರು ಸರಳತೆ, ಪ್ರಾಮಾಣಿಕತೆ ಹಾಗೂ ಧೈರ್ಯದಿಂದ ದೇಶದ ಸೇವೆ ಮಾಡಿದ ನಾಯಕರು. ರೈತರು ಮತ್ತು ಸೈನಿಕರ ಮಹತ್ವವನ್ನು ಸಾರಿದ ಅವರ ಜೈ ಜವಾನ್, ಜೈ ಕಿಸಾನ್ ಘೋಷಣೆ ಇಂದಿಗೂ ಭಾರತೀಯರಲ್ಲಿ ದೇಶಪ್ರೇಮ ಮತ್ತು ಆತ್ಮವಿಶ್ವಾಸ ಮೂಡಿಸುತ್ತಿದೆ. ಗಾಂಧೀಜಿ ಮತ್ತು ಶಾಸ್ತ್ರಿ ಅವರ ಆದರ್ಶಗಳನ್ನು ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯಗುರು ಸುಮಲತಾ, ಸಹ ಶಿಕ್ಷಕಿ ಸಂಗಮೇಶ್ವರಿ, ಅತಿಥಿ ಶಿಕ್ಷಕರ ಸಂಘದ ಅಧ್ಯಕ್ಷ ಜಿ.ಕೆ. ನಾಗರಾಜ, ಎಸ್‌ಡಿಎಂಸಿ ಅಧ್ಯಕ್ಷ ಚಂದ್ರು, ಕಲಾ ನಾಗರಾಜ ಹಾಗೂ ಶಾಲಾ ಮಕ್ಕಳು ಉಪಸ್ಥಿತರಿದ್ದರು.

# ಡಿವೈಎಸ್ಪಿ ದತ್ತಾತ್ರೇಯ ಕಾರ್ನಾಡ ವರ್ಗಾವಣೆ

ಲಿಂಗಸುಗೂರು: ಲಿಂಗಸುಗೂರು ಉಪವಿಭಾಗದ ಡಿವೈಎಸ್ಪಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ದತ್ತಾತ್ರೇಯ ಕಾರ್ನಾಡ ಅವರನ್ನು ಡಿಸಿಆರ್‌ಇ ವಿಭಾಗಕ್ಕೆ ವರ್ಗಾವಣೆ ಮಾಡಿ ಪೊಲೀಸ್ ಮಹಾನಿರ್ದೇಶಕರು ಹಾಗೂ ಮಹಾನಿರೀಕ್ಷಕರ ಕಚೇರಿಯಿಂದ ಆದೇಶ ಹೊರಡಿಸಲಾಗಿದೆ.

ದತ್ತಾತ್ರೇಯ ಕಾರ್ನಾಡ ಅವರ ವರ್ಗಾವಣೆಯಿಂದ ತೆರವಾದ ಲಿಂಗಸುಗೂರು ಡಿವೈಎಸ್ಪಿ ಹುದ್ದೆಗೆ ಬೆಂಗಳೂರಿನ ಟಿಟಿಎ ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಶರಣಪ್ಪ ಅವರನ್ನು ನೇಮಕ ಮಾಡಲಾಗಿದೆ.

ಶರಣಪ್ಪ ಅವರು ಲಿಂಗಸುಗೂರು ಉಪವಿಭಾಗದ ನೂತನ ಡಿವೈಎಸ್ಪಿಯಾಗಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ.


# ಪತ್ರಿಕಾ ಪ್ರಕಟಣೆ

**ಮಾರಾಟ ಪತ್ರಗಳ ಮೂಲ ದಾಖಲೆಗಳು ಕಳೆದುಹೋಗಿವೆ**

ಶಹಾಪುರ ತಾಲೂಕು ಸಿಂಗನಹಳ್ಳಿ ನಿವಾಸಿ ದೇವರೆಡ್ಡಿ ಪೊಲೀಸ್ ಪಾಟೀಲ್ ಅವರಿಗೆ ಸಂಬಂಧಿಸಿದ ನಾಲ್ಕು ಮಾರಾಟ ಪತ್ರಗಳ (Sale Deeds) ಮೂಲ ದಾಖಲೆಗಳು ಶಹಾಪುರದಲ್ಲಿ ಕಳೆದುಹೋಗಿವೆ.

ದಾಖಲೆ ಸಂಖ್ಯೆ 972/2016-17, 843/2015-16, 4474/2010-11 ಹಾಗೂ 1516/2018-19 ಸಂಖ್ಯೆಯ ಮಾರಾಟ ಪತ್ರಗಳು ಅ.1ರಂದು ಶಹಾಪುರದಲ್ಲಿ ಕಳೆದುಹೋಗಿವೆ. ಈ ಕುರಿತು ಅ.2ರಂದು ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಯಾದಗಿರಿ ಘಟಕದಲ್ಲಿ ಕಳೆದುಹೋದ ದಾಖಲೆಗಳ ವರದಿ ಸಂಖ್ಯೆ 2459429/2026 ದಾಖಲಿಸಲಾಗಿದೆ.

ಮೇಲ್ಕಂಡ ಮೂಲ ದಾಖಲೆಗಳು ಯಾರಿಗಾದರೂ ದೊರೆತಲ್ಲಿ ಅವುಗಳನ್ನು ದುರ್ಬಳಕೆ ಮಾಡಿಕೊಳ್ಳದೆ ಸಂಬಂಧಪಟ್ಟ ಮಾಲೀಕರಿಗೆ ತಲುಪಿಸಬೇಕು. ದಾಖಲೆಗಳ ಕುರಿತು ಮಾಹಿತಿ ದೊರೆತಲ್ಲಿ ದೇವರೆಡ್ಡಿ ಪೊಲೀಸ್ ಪಾಟೀಲ್, ಮೊಬೈಲ್: 9900465252 ಅವರನ್ನು ಸಂಪರ್ಕಿಸುವಂತೆ ಪತ್ರಿಕಾ ಪ್ರಕಟಣೆಯಲ್ಲಿ ಕೋರಲಾಗಿದೆ.


# ಎನ್‌ಎಸ್‌ಎಸ್ ವಾರ್ಷಿಕ ವಿಶೇಷ ಶಿಬಿರಕ್ಕೆ ಚಾಲನೆ



ರಾಯಚೂರು, ಅ.2: ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಾಯಚೂರು ಹಾಗೂ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಹೇರೂರು ಚಂದ್ರಾಯಗೌಡ ಮಲ್ದಾರ ಸಿದ್ದಪ್ಪಗೌಡ ಕರೆಡ್ಡಿ ಶಿಕ್ಷಣ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕದ ವತಿಯಿಂದ ವಾರ್ಷಿಕ ವಿಶೇಷ ಶಿಬಿರದ ಉದ್ಘಾಟನಾ ಸಮಾರಂಭ ಗುರುವಾರ ನಡೆಯಿತು.

ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಿ, ದೀಪ ಬೆಳಗಿಸುವ ಮೂಲಕ ಶಿಬಿರಕ್ಕೆ ಚಾಲನೆ ನೀಡಲಾಯಿತು. ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಸಿದ್ದಯ್ಯ ತಾತ ಗುರುವಿನ ಮಾತನಾಡಿ, ಎನ್‌ಎಸ್‌ಎಸ್ ವಿಶೇಷ ಶಿಬಿರವು ವಿದ್ಯಾರ್ಥಿಗಳಲ್ಲಿ ಶಿಸ್ತು, ಸಾಮಾಜಿಕ ಹೊಣೆಗಾರಿಕೆ ಹಾಗೂ ಸಕಾರಾತ್ಮಕ ಮನೋಭಾವ ಬೆಳೆಸಲು ಸಹಕಾರಿಯಾಗಲಿ ಎಂದು ಆಶಿಸಿದರು.

ಮುಖ್ಯ ಅತಿಥಿಯಾಗಿದ್ದ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಉಪಾಧ್ಯಕ್ಷ ಹಾಗೂ ಶಿಕ್ಷಣ ಮಹಾವಿದ್ಯಾಲಯದ ಅಧ್ಯಕ್ಷ ಅಶೋಕ್ ಪಾಟೀಲ್ ಅತನೂರು ಮಾತನಾಡಿ, ನನಗಲ್ಲ, ನಿನಗೆ ಎಂಬ ಧ್ಯೇಯವಾಕ್ಯದೊಂದಿಗೆ ಕಾರ್ಯನಿರ್ವಹಿಸುವ ಎನ್‌ಎಸ್‌ಎಸ್ ಸ್ವಯಂಸೇವಕರು ಜಾತಿ, ಮತ ಭೇದಗಳನ್ನು ಮರೆತು ಸಹಬಾಳ್ವೆ ಮತ್ತು ಸೇವಾ ಮನೋಭಾವ ಬೆಳೆಸಿಕೊಳ್ಳುತ್ತಾರೆ. ಲಕ್ಷಾಂತರ ಯುವಜನರ ಸರ್ವಾಂಗೀಣ ಬೆಳವಣಿಗೆಯಲ್ಲಿ ಎನ್‌ಎಸ್‌ಎಸ್ ಮಹತ್ವದ ಪಾತ್ರ ವಹಿಸುತ್ತಿದೆ. ಶಿಬಿರಾರ್ಥಿಗಳು ಸಕ್ರಿಯವಾಗಿ ಪಾಲ್ಗೊಂಡು ತಮ್ಮ ವ್ಯಕ್ತಿತ್ವ ವಿಕಸನಕ್ಕೂ ಆದ್ಯತೆ ನೀಡಬೇಕು ಎಂದರು.

ಎಸ್‌ಎಲ್‌ಡಿ ಪಬ್ಲಿಕ್ ಶಾಲೆಯ ಅಧ್ಯಕ್ಷ ಮಲ್ಲಿಕಾರ್ಜುನ ದೇಸಾಯಿ ಮಾತನಾಡಿ, ವಿದ್ಯಾರ್ಥಿಗಳು ಶಿಬಿರದ ಸಮಯವನ್ನು ಸದುಪಯೋಗಪಡಿಸಿಕೊಂಡು ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಎಂದರು. ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಗಿರಿಮಲ್ಲಪ್ಪ ಕರಡೇಕಲ್, ರಾಷ್ಟ್ರೀಯ ಸೇವಾ ಯೋಜನೆಯ ಧ್ಯೇಯ ಮತ್ತು ಉದ್ದೇಶಗಳನ್ನು ಪ್ರತಿಯೊಬ್ಬ ಶಿಬಿರಾರ್ಥಿಯೂ ಅರಿತುಕೊಳ್ಳಬೇಕು ಎಂದು ಹೇಳಿದರು.

ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಮಂಜುನಾಥ ಪಾಟೀಲ ವಟಗಲ ಮಾತನಾಡಿ, ಒಂದು ವಾರದ ಶಿಬಿರದಲ್ಲಿ ಪಡೆಯುವ ಅನುಭವವನ್ನು ಜೀವನದಲ್ಲಿ ಅಳವಡಿಸಿಕೊಂಡರೆ ನಾಯಕತ್ವ ಗುಣ ಬೆಳೆಸಿಕೊಳ್ಳುವುದರೊಂದಿಗೆ ಸಮಾಜಪರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಪ್ರೇರಣೆ ದೊರೆಯುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಶರಣ ಭೂಪಾಲ ನಾಡಗೌಡ, ವಿದ್ಯಾರ್ಥಿಗಳು ಶಿಬಿರದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಅದರ ಸಂಪೂರ್ಣ ಪ್ರಯೋಜನ ಪಡೆಯಬೇಕು ಎಂದು ಕರೆ ನೀಡಿದರು.

ದೈಹಿಕ ಶಿಕ್ಷಣ ನಿರ್ದೇಶಕ ಶಶಿಕುಮಾರ್ ಹಾಗೂ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿಗಳು ಪ್ರಶಿಕ್ಷಣಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಉಪನ್ಯಾಸಕರು ಹಾಗೂ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

# ಶ್ರಮದಾನದೊಂದಿಗೆ ಗಾಂಧಿಶಾಸ್ತ್ರಿ ಜಯಂತಿಗೆ ಅರ್ಥಪೂರ್ಣ ಆಚರಣೆ



ರಾಯಚೂರು: ಮಹಾತ್ಮ ಗಾಂಧೀಜಿಯವರ 157ನೇ ಜಯಂತಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಅಂಗವಾಗಿ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕದ ವತಿಯಿಂದ ನಗರದ ನಿಜಲಿಂಗಪ್ಪ ನಗರದ ಸಾರ್ವಜನಿಕ ಸ್ಥಳಗಳು ಮತ್ತು ಉದ್ಯಾನವನಗಳಲ್ಲಿ ಸ್ವಚ್ಛತಾ ಶ್ರಮದಾನ ನಡೆಸಲಾಯಿತು.

ಸ್ವಚ್ಛತಾ ಹೀ ಸೇವಾ ಹಾಗೂ ಸ್ವಚ್ಛ ಭಾರತ ಅಭಿಯಾನದ ಆಶಯದೊಂದಿಗೆ ಎನ್‌ಎಸ್‌ಎಸ್ ಸ್ವಯಂಸೇವಕಿಯರು ಸಾರ್ವಜನಿಕ ಪ್ರದೇಶಗಳನ್ನು ಸ್ವಚ್ಛಗೊಳಿಸಿ, ಪರಿಸರ ಸಂರಕ್ಷಣೆಯ ಮಹತ್ವದ ಕುರಿತು ನಾಗರಿಕರಲ್ಲಿ ಅರಿವು ಮೂಡಿಸಿದರು.

ಇದೇ ವೇಳೆ ಪ್ಲಾಸ್ಟಿಕ್ ಬಳಕೆಯಿಂದ ಪರಿಸರ ಹಾಗೂ ಜೀವಜಾಲದ ಮೇಲೆ ಉಂಟಾಗುವ ಹಾನಿಯ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು. ವಿಶೇಷವಾಗಿ ಏಕಬಳಕೆ ಪ್ಲಾಸ್ಟಿಕ್‌ನಿಂದ ದೂರವಿದ್ದು, ದೈನಂದಿನ ಜೀವನದಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ಸಾಧ್ಯವಾದಷ್ಟು ಕಡಿಮೆ ಮಾಡುವ ಮೂಲಕ ಸ್ವಚ್ಛ ಪರಿಸರ ನಿರ್ಮಾಣಕ್ಕೆ ಕೈಜೋಡಿಸುವಂತೆ ಮನವಿ ಮಾಡಲಾಯಿತು.

ಎನ್‌ಎಸ್‌ಎಸ್ ಸ್ವಯಂಸೇವಕಿಯರಾದ ಮಹೇಶ್ವರಿ ಬಸವರಾಜ, ಸಂಗೀತಾ ವೆಂಕಟೇಶ ಹಾಗೂ ರೇಖಾ ಅವರ ನೇತೃತ್ವದಲ್ಲಿ ಜಮುನಾ, ಸ್ವಪ್ನಾ, ರೇಣುಕಾ, ರೂಪಾ, ತುಳಸಿ, ಅಂಬುಜಾ ಮತ್ತು ಸಂಗೀತಾ ವಿ. ಅವರು ಸ್ವಚ್ಛತಾ ಕಾರ್ಯ ಹಾಗೂ ಜನಜಾಗೃತಿ ಚಟುವಟಿಕೆಯಲ್ಲಿ ಪಾಲ್ಗೊಂಡರು.

ಕಾಲೇಜಿನ ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ಡಾ. ಸಂತೋಷಕುಮಾರ ರೇವೂರ ಅವರ ಮಾರ್ಗದರ್ಶನದಲ್ಲಿ ಕಾರ್ಯಕ್ರಮ ನಡೆಯಿತು. ಗಾಂಧೀಜಿಯವರ ಸ್ವಚ್ಛತೆಯ ಆಶಯವನ್ನು ಶ್ರಮದಾನದ ಮೂಲಕ ಸಾಕಾರಗೊಳಿಸುವ ಸಂದೇಶದೊಂದಿಗೆ ಗಾಂಧಿಶಾಸ್ತ್ರಿ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

# ಪುರಸಭೆಯಲ್ಲಿ ಗಾಂಧೀಜಿಶಾಸ್ತ್ರಿ ಜಯಂತಿ ಆಚರಣೆ



ದೇವದುರ್ಗ: ಪಟ್ಟಣದ ಪುರಸಭೆ ಕಾರ್ಯಾಲಯದ ಸಭಾಂಗಣದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿಯನ್ನು ಗೌರವಪೂರ್ವಕವಾಗಿ ಆಚರಿಸಲಾಯಿತು.

ಪುರಸಭೆ ಮುಖ್ಯಾಧಿಕಾರಿ ಕೆ. ಹಂಪಯ್ಯ ಅವರು ಗಾಂಧೀಜಿ ಹಾಗೂ ಶಾಸ್ತ್ರಿ ಅವರ ಭಾವಚಿತ್ರಗಳಿಗೆ ಮಾಲಾರ್ಪಣೆ ಮಾಡಿ ಪುಷ್ಪನಮನ ಸಲ್ಲಿಸಿದರು. ದೇಶದ ಸ್ವಾತಂತ್ರ್ಯ ಹೋರಾಟ ಹಾಗೂ ರಾಷ್ಟ್ರ ನಿರ್ಮಾಣದಲ್ಲಿ ಉಭಯ ಮಹನೀಯರು ನೀಡಿದ ಕೊಡುಗೆ ಮತ್ತು ಅವರ ಆದರ್ಶಗಳನ್ನು ಈ ಸಂದರ್ಭದಲ್ಲಿ ಸ್ಮರಿಸಲಾಯಿತು.

ಕಾರ್ಯಕ್ರಮದಲ್ಲಿ ದೇವದುರ್ಗ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಚ್. ಶಿವರಾಜ್, ಪುರಸಭೆ ಮಾಜಿ ಸದಸ್ಯ ಮಲ್ಲಿಕಾರ್ಜುನ ಪಾಟೀಲ್ ಅಳ್ಳುಂಡಿ, ನಿವೃತ್ತ ಶಿಕ್ಷಕ ಚಿದಾನಂದಪ್ಪ ಶಿವಂಗಿ ಸೇರಿದಂತೆ ಹಲವರು ಪಾಲ್ಗೊಂಡು ಗಾಂಧೀಜಿ ಹಾಗೂ ಶಾಸ್ತ್ರಿ ಅವರಿಗೆ ಗೌರವ ಸಲ್ಲಿಸಿದರು.

ಪುರಸಭೆ ಸಿಬ್ಬಂದಿಗಳಾದ ರಂಗಪ್ಪ ನಾಯಕ, ರಾಮು ವಾಟರ್‌ಮ್ಯಾನ್, ಆಂಜನೇಯ, ರಾಮು, ಇಸಾಕ್, ಮಾಳಿಂಗರಾಯ, ಸೋಮಶೇಖರ್, ನಾಗರಾಜ್, ಭೀಮರಾಯ, ಶರಣಮ್ಮ ಎಂ. ಶಾಬಾದಿ, ಗೌರಮ್ಮ ಎಸ್., ಶರಣಮ್ಮ ಪಿ., ಶ್ವೇತಾ ಶೆಟ್ಟಿ, ಕರೆಮ್ಮ, ರೇಣುಕಾ, ರೇಣುಕಮ್ಮ, ಮಾಲನ್ ಗೌರಂಪೇಟೆ, ಕರಿಯಪ್ಪ ನಾಯಕ, ಲಕ್ಷ್ಮಯ್ಯ ಪೂಜಾರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಗಾಂಧೀಜಿಶಾಸ್ತ್ರಿ ಆದರ್ಶಗಳು ಮುಂದಿನ ಪೀಳಿಗೆಗೆ ದಾರಿದೀಪ: ರೇಖಾ ಪಾಟೀಲ



ರಾಯಚೂರು, ಅ.2: ಸ್ವಾತಂತ್ರ್ಯ ಚಳವಳಿಯಲ್ಲಿ ಮಹತ್ವದ ಪಾತ್ರ ವಹಿಸಿದ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಬದುಕು, ತತ್ವ ಮತ್ತು ಆದರ್ಶಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ರೇಖಾ ಪಾಟೀಲ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ನಗರದ ಕನ್ನಡ ಭವನದಲ್ಲಿ ಹಮ್ಮಿಕೊಂಡಿದ್ದ ಗಾಂಧೀಜಿ ಮತ್ತು ಶಾಸ್ತ್ರಿ ಅವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮದ ಆರಂಭದಲ್ಲಿ ಉಭಯ ಮಹನೀಯರ ಭಾವಚಿತ್ರಗಳಿಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಲಾಯಿತು. ಬಳಿಕ ವಿದ್ಯಾಸಾಗರ್, ವೈ.ಕೆ. ಯಶೋಧ, ಪ್ರತಿಭಾ ಗೋನಾಳ್ ಹಾಗೂ ರಾಮಣ್ಣ ಬೊಯರ್ ಅವರು ಸರ್ವಧರ್ಮ ಪ್ರಾರ್ಥನೆ ನಡೆಸಿಕೊಟ್ಟರು.

ಗಾಂಧೀಜಿ ಭಾರತದ ಸ್ವಾತಂತ್ರ್ಯ ಹೋರಾಟಕ್ಕೆ ಸತ್ಯ, ಅಹಿಂಸೆ ಮತ್ತು ಸತ್ಯಾಗ್ರಹದ ಮೂಲಕ ಹೊಸ ದಿಕ್ಕು ನೀಡಿದರು. ಶಾಂತಿಯ ಮಾರ್ಗದಲ್ಲಿಯೇ ಹೋರಾಟ ನಡೆಸಿ ಸ್ವಾತಂತ್ರ್ಯ ಚಳವಳಿಗೆ ಜನಶಕ್ತಿಯನ್ನು ಒಗ್ಗೂಡಿಸಿದ ಅವರ ಚಿಂತನೆಗಳು ಇಂದಿಗೂ ಮಹತ್ವ ಕಳೆದುಕೊಂಡಿಲ್ಲ. ಜಗತ್ತಿನ ವಿವಿಧೆಡೆ ಸಂಘರ್ಷಗಳು ನಡೆಯುತ್ತಿರುವ ಸಂದರ್ಭದಲ್ಲಿ ಗಾಂಧೀಜಿಯವರ ಅಹಿಂಸಾ ಸಂದೇಶ ಮತ್ತಷ್ಟು ಪ್ರಸ್ತುತವಾಗಿದೆ. ಅವರ ಜನ್ಮದಿನವನ್ನು ಅಂತರರಾಷ್ಟ್ರೀಯ ಅಹಿಂಸಾ ದಿನವನ್ನಾಗಿ ಆಚರಿಸುತ್ತಿರುವುದು ಅವರ ಚಿಂತನೆಗಳ ಜಾಗತಿಕ ಮಹತ್ವವನ್ನು ಸಾರುತ್ತದೆ ಎಂದು ರೇಖಾ ಪಾಟೀಲ ತಿಳಿಸಿದರು.

ಲಾಲ್ ಬಹದ್ದೂರ್ ಶಾಸ್ತ್ರಿ ಅವರು ಸ್ವಾತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡು ಸೆರೆವಾಸ ಅನುಭವಿಸುವುದರ ಜೊತೆಗೆ, ಸ್ವಾತಂತ್ರ್ಯಾನಂತರವೂ ದೇಶ ಸೇವೆಗೆ ತಮ್ಮ ಜೀವನವನ್ನು ಮುಡಿಪಾಗಿಟ್ಟಿದ್ದರು. ಸರಳತೆ, ಪ್ರಾಮಾಣಿಕತೆ ಮತ್ತು ದೇಶನಿಷ್ಠೆಯ ಮೂಲಕ ಅವರು ವಿಶಿಷ್ಟ ಗುರುತು ಮೂಡಿಸಿದ್ದಾರೆ. ಗಾಂಧೀಜಿ ಹಾಗೂ ಶಾಸ್ತ್ರಿ ಅವರ ಜೀವನ ಮೌಲ್ಯಗಳನ್ನು ಯುವಜನತೆಗೆ ತಲುಪಿಸುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಪ್ರೇರಣೆ ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಲಕ್ಷ್ಮೀದೇವಿ ಶಾಸ್ತ್ರಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿ ತಾಯಪ್ಪ ಹೊಸೂರು, ಖಜಾಂಚಿ ನಾಗಪ್ಪ ಹೊರಪೇಟೆ, ದಂಡಪ್ಪ ಬಿರಾದಾರ್, ಶಾಂತ ಕುಲಕರ್ಣಿ, ವೈಶಾಲಿ ಪಾಟೀಲ, ಯಶೋದಾ, ವೀರೇಶ್ ಬಾಬು, ವಿಶ್ವನಾಥ ಶಾಸ್ತ್ರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗಾಂಧೀಜಿ ತತ್ವಗಳ ಮೂಲಕ ಕೋಮುವಾದದ ವಿರುದ್ಧ ಜಾಗೃತಿ ಅಗತ್ಯ: ಗಿರಿಯಪ್ಪ ಪೂಜಾರಿ



ಜಾಲಹಳ್ಳಿ, ಅ.2: ಮಹಾತ್ಮ ಗಾಂಧೀಜಿ ಪ್ರತಿಪಾದಿಸಿದ ಸತ್ಯ, ಅಹಿಂಸೆ, ಶಾಂತಿ ಮತ್ತು ಸಹಬಾಳ್ವೆಯ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜದಲ್ಲಿ ಕೋಮುವಾದದ ವಿರುದ್ಧ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಪತ್ರಕರ್ತ ಗಿರಿಯಪ್ಪ ಪೂಜಾರಿ ಹೇಳಿದರು.

ಪಟ್ಟಣದ ಹಟ್ಟಿ ಮುಖ್ಯ ರಸ್ತೆಗೆ ಹೊಂದಿಕೊಂಡಿರುವ ಮಹಾತ್ಮ ಗಾಂಧೀಜಿ ವೃತ್ತದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಗಾಂಧೀಜಿ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಾಮಾಜಿಕ ಸಾಮರಸ್ಯವನ್ನು ಕಾಪಾಡಿಕೊಳ್ಳಲು ಗಾಂಧೀಜಿಯವರ ವಿಚಾರಧಾರೆಗಳು ಇಂದಿಗೂ ಪ್ರಸ್ತುತವಾಗಿವೆ. ಜಾತಿ, ಧರ್ಮದ ಹೆಸರಿನಲ್ಲಿ ಜನರ ನಡುವೆ ಭಿನ್ನಾಭಿಪ್ರಾಯ ಮೂಡದಂತೆ ಪ್ರತಿಯೊಬ್ಬರೂ ಎಚ್ಚರ ವಹಿಸಿ, ಪರಸ್ಪರ ಗೌರವ ಮತ್ತು ಸಹಬಾಳ್ವೆಯ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಗಿರಿಯಪ್ಪ ಪೂಜಾರಿ ತಿಳಿಸಿದರು.

ಇದಕ್ಕೂ ಮುನ್ನ ವಕೀಲ ರಾಜಾವಾಸುದೇವ ನಾಯಕ, ಶ್ರೀಧರ ದೇಸಾಯಿ ಹಾಗೂ ದುರುಗಪ್ಪ ರಾಮಪಾಳಿ ಅವರು ಗಾಂಧೀಜಿಯವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಬಾಬಾ ಮೆಡಿಕಲ್ ಪ್ರಾಸ್ತಾವಿಕವಾಗಿ ಮಾತನಾಡಿ, ಗಾಂಧೀಜಿಯವರ ಜೀವನ, ಸ್ವಾತಂತ್ರ್ಯ ಹೋರಾಟ ಹಾಗೂ ದೇಶದ ಸ್ವಾತಂತ್ರ್ಯ ಚಳವಳಿಗೆ ನೀಡಿದ ಕೊಡುಗೆಯನ್ನು ಸ್ಮರಿಸಿದರು.

ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ ರಂಗಣ್ಣ ಕೊಲ್ಕರ್ ಮಾತನಾಡಿ, ಗಾಂಧೀಜಿಯವರ ಆದರ್ಶಗಳನ್ನು ಕೇವಲ ಜಯಂತಿಗೆ ಸೀಮಿತಗೊಳಿಸದೆ ನಿತ್ಯ ಜೀವನದಲ್ಲಿ ಪಾಲಿಸಬೇಕು. ಹೋರಾಟ ಮತ್ತು ತ್ಯಾಗದ ಮೂಲಕ ಗಳಿಸಿದ ಸ್ವಾತಂತ್ರ್ಯವನ್ನು ಕಾಪಾಡಿಕೊಂಡು ಹೋಗುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ ಎಂದರು.

ವಕೀಲ ರಾಜಾವಾಸುದೇವ ನಾಯಕ ಮಾತನಾಡಿ, ಸತ್ಯ ಮತ್ತು ಅಹಿಂಸೆಯ ಮಾರ್ಗದಲ್ಲಿ ಜನರನ್ನು ಸಂಘಟಿಸುವ ಮೂಲಕ ಗಾಂಧೀಜಿ ಸ್ವಾತಂತ್ರ್ಯ ಹೋರಾಟಕ್ಕೆ ಹೊಸ ಆಯಾಮ ನೀಡಿದರು. ಅವರ ವಿಚಾರಗಳು ಇಂದಿನ ಮತ್ತು ಮುಂದಿನ ಪೀಳಿಗೆಗೂ ಮಾರ್ಗದರ್ಶಕವಾಗಿವೆ ಎಂದು ಹೇಳಿದರು.

ಅಬ್ದುಲ್ ರಹಮಾನ್ ಖುರೇಶಿ ಅವರು ಗಾಂಧೀಜಿಯವರ ಜೀವನ ಚರಿತ್ರೆ, ಸ್ವಾತಂತ್ರ್ಯ ಹೋರಾಟ ಹಾಗೂ ದೇಶಕ್ಕಾಗಿ ಮಾಡಿದ ತ್ಯಾಗವನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಶ್ರೀಧರ ದೇಸಾಯಿ, ದುರುಗಪ್ಪ ರಾಮಪಾಳಿ, ರಂಗಣ್ಣ ಕೊಲ್ಕರ್, ಭೀಮಣ್ಣ, ಗುಮೇಧಾರ್ ಬುಡಪ್ಪ ಕಾವಲಿ, ಇಮಾಮ್ ಸಾಬ್ ಉದ್ದಾರ, ಹೈದರ್ ಸಾಬ್ ಮುಲ್ಲಾ, ರಂಗಪ್ಪ ಬಂಡಿ, ಶಿವು ಪಾಟೀಲ್ ಗಾಣದಾಳ್, ಅಯ್ಯನ್ ಗೌಡ ಮಾಸ್ತಿ, ಗ್ರಾಪಂ ಸದಸ್ಯರಾದ ಮಕ್ತುಮ್ ಪರಾಶಿ, ರಂಗಪ್ಪ ಕುದರಿ, ಕುಮಾರ್ ಚಪ್ಪಳಕಿ, ಸಲಬಣ್ಣ ಹಂಪರಗುಂದಿ, ಶಿವಪ್ಪ ನಾಯಕ ಗಾಂಜಿ, ಹುಸೇನ್ ನಾಸಿ, ಆಂಜನೇಯ ರಾಮಪಾಳಿ, ಮೌನೇಶ್ ಚಪ್ಪಳಕಿ, ರಾಜು ತವಗ, ಮಹೇಬೂಬ್ ಕುರುಕುಂದಿ, ವೆಂಕಟೇಶ್ ಕಸನದೊಡ್ಡಿ, ತಾತಪ್ಪ ನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮಾನವೀಯ ಮೌಲ್ಯ ಬೆಳೆಸುವ ಶಿಕ್ಷಣ ವ್ಯವಸ್ಥೆ ಅಗತ್ಯ: ಅಜಯ್ ಕಾಮತ್




ರಾಯಚೂರು, ಅ.2: ಶಿಕ್ಷಣವು ಕೇವಲ ಉದ್ಯೋಗ ಪಡೆಯುವ ಸಾಧನವಾಗಿ ಉಳಿಯದೆ, ವಿದ್ಯಾರ್ಥಿಗಳಲ್ಲಿ ನೀತಿ, ನೈತಿಕತೆ, ವೈಚಾರಿಕತೆ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ಮೂಲಕ ಸಮಾಜಮುಖಿ ಹೊಸ ಪೀಳಿಗೆಯನ್ನು ರೂಪಿಸುವಂತಿರಬೇಕು ಎಂದು ಎಐಡಿಎಸ್‌ಓ ರಾಜ್ಯ ಕಾರ್ಯದರ್ಶಿ ಅಜಯ್ ಕಾಮತ್ ಹೇಳಿದರು.

ಮಹಾತ್ಮ ಜ್ಯೋತಿಬಾ ಫುಲೆ ಅವರ 200ನೇ ಜನ್ಮ ವಾರ್ಷಿಕೋತ್ಸವದ ಅಂಗವಾಗಿ ಎಐಡಿಎಸ್‌ಓ ಕರ್ನಾಟಕ ರಾಜ್ಯ ಸಮಿತಿ ವತಿಯಿಂದ ಅ.2ರಿಂದ 4ರವರೆಗೆ ನಗರದ ವಿದ್ಯಾನಿಧಿ ಕಾಲೇಜಿನಲ್ಲಿ ಹಮ್ಮಿಕೊಂಡಿರುವ ರಾಜ್ಯಮಟ್ಟದ ವಿದ್ಯಾರ್ಥಿ ಶಿಬಿರದ ಮೊದಲ ದಿನದ ಮಹಾನ್ ವ್ಯಕ್ತಿಗಳ ಕನಸುಗಳು ಮತ್ತು ಇಂದಿನ ಸಾಮಾಜಿಕ-ಸಾಂಸ್ಕೃತಿಕ ಸಮಸ್ಯೆಗಳು ವಿಷಯದ ಗೋಷ್ಠಿಯಲ್ಲಿ ಅವರು ಮಾತನಾಡಿದರು.

ಬ್ರಿಟಿಷರ ಆಡಳಿತದ ಅವಧಿಯಲ್ಲಿ ಅವರ ಆಡಳಿತ ವ್ಯವಸ್ಥೆಗೆ ಅಗತ್ಯವಿರುವ ಸಿಬ್ಬಂದಿಯನ್ನು ಸಿದ್ಧಪಡಿಸುವ ದೃಷ್ಟಿಯಿಂದ ಶಿಕ್ಷಣ ಪದ್ಧತಿ ರೂಪಿಸಲಾಗಿತ್ತು. ಇದರಿಂದ ಸಾಮಾನ್ಯ ಜನರಿಗೆ ಶಿಕ್ಷಣದ ಅವಕಾಶಗಳು ಸಮರ್ಪಕವಾಗಿ ತಲುಪಲಿಲ್ಲ. ಬಳಿಕ ದೇಶದ ನವೋದಯ ಚಿಂತಕರು ನಡೆಸಿದ ಹೋರಾಟಗಳು ಶಿಕ್ಷಣವನ್ನು ಜನಸಾಮಾನ್ಯರ ಹಕ್ಕಾಗಿಸುವಲ್ಲಿ ಮಹತ್ವದ ಪಾತ್ರ ವಹಿಸಿದವು ಎಂದು ಅವರು ಅಭಿಪ್ರಾಯಪಟ್ಟರು.

ಶಿಕ್ಷಣವನ್ನು ವ್ಯಾಪಾರದ ವಸ್ತುವನ್ನಾಗಿ ಪರಿಗಣಿಸದೆ ಎಲ್ಲರಿಗೂ ಸುಲಭವಾಗಿ ದೊರೆಯುವ ಸಾರ್ವಜನಿಕ ಹಕ್ಕಾಗಿ ಉಳಿಸಬೇಕು. ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸಲು ಅಗತ್ಯ ಹಣಕಾಸು ಒದಗಿಸುವುದು ಸರ್ಕಾರದ ಪ್ರಮುಖ ಜವಾಬ್ದಾರಿಯಾಗಬೇಕು. ಶಿಕ್ಷಣವು ಯಾರೋ ನೀಡಿದ ಕೊಡುಗೆಯಲ್ಲ, ಜನರು ಹೋರಾಟದ ಮೂಲಕ ಪಡೆದುಕೊಂಡ ಹಕ್ಕಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳು ಪಠ್ಯ ಮತ್ತು ಉದ್ಯೋಗದ ಚೌಕಟ್ಟಿಗೆ ಮಾತ್ರ ಸೀಮಿತರಾಗದೆ ವೈಜ್ಞಾನಿಕ ಮನೋಭಾವ, ಸಾಮಾಜಿಕ ಕಾಳಜಿ ಹಾಗೂ ಜವಾಬ್ದಾರಿಯನ್ನು ಬೆಳೆಸಿಕೊಳ್ಳಬೇಕು. ಸಮಾಜದಲ್ಲಿನ ಅನ್ಯಾಯ, ಅಸಮಾನತೆ ಮತ್ತು ಸಾಮಾಜಿಕ-ಸಾಂಸ್ಕೃತಿಕ ಸಮಸ್ಯೆಗಳನ್ನು ಅರ್ಥಮಾಡಿಕೊಂಡು ಅವುಗಳಿಗೆ ಸ್ಪಂದಿಸುವ ವ್ಯಕ್ತಿತ್ವವನ್ನು ರೂಪಿಸುವುದು ಶಿಕ್ಷಣದ ಉದ್ದೇಶವಾಗಬೇಕು ಎಂದು ಅಜಯ್ ಕಾಮತ್ ತಿಳಿಸಿದರು.

ಮೂರು ದಿನಗಳ ರಾಜ್ಯಮಟ್ಟದ ಶಿಬಿರದಲ್ಲಿ ವಿದ್ಯಾರ್ಥಿಗಳ ಶಿಕ್ಷಣ, ಸಾಮಾಜಿಕ ಮತ್ತು ಸಾಂಸ್ಕೃತಿಕ ವಿಷಯಗಳಿಗೆ ಸಂಬಂಧಿಸಿದ ವಿವಿಧ ಗೋಷ್ಠಿಗಳು, ಸಂವಾದ ಹಾಗೂ ಚರ್ಚೆಗಳು ನಡೆಯಲಿವೆ.

# ಗಾಂಧೀಜಿ ಆದರ್ಶಗಳನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಿ: ಪಾಗುಂಟ ಬಿ. ರಾಮಯ್ಯ



ರಾಯಚೂರು, ಅ.2: ಮಹಾತ್ಮ ಗಾಂಧೀಜಿಯವರ ಜಯಂತಿಯನ್ನು ಕೇವಲ ಒಂದು ದಿನದ ಆಚರಣೆಗೆ ಸೀಮಿತಗೊಳಿಸದೆ, ಅವರು ಪ್ರತಿಪಾದಿಸಿದ ಸತ್ಯ, ಅಹಿಂಸೆ, ಸೇವೆ ಹಾಗೂ ಸರಳತೆಯ ಮೌಲ್ಯಗಳನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಆರ್ಯ ವೈಶ್ಯ ಸ್ಟೇಷನ್ ಏರಿಯಾ ಸಂಘದ ಅಧ್ಯಕ್ಷ ಪಾಗುಂಟ ಬಿ. ರಾಮಯ್ಯ ಹೇಳಿದರು.

ನಗರದ ಗಾಂಧಿ ವೃತ್ತದಲ್ಲಿರುವ ಮಹಾತ್ಮ ಗಾಂಧೀಜಿಯವರ ಪುತಳಿಗೆ ಆರ್ಯ ವೈಶ್ಯ ಸ್ಟೇಷನ್ ಏರಿಯಾ ಸಂಘದ ವತಿಯಿಂದ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಲಾಯಿತು. ಈ ವೇಳೆ ಮಹಾತ್ಮ ಗಾಂಧೀಜಿಗೆ ಜಯವಾಗಲಿ, ಭಾರತ್ ಮಾತಾಕಿ ಜೈ ಎಂಬ ಘೋಷಣೆಗಳನ್ನು ಕೂಗಲಾಯಿತು.

ನಂತರ ಮಾತನಾಡಿದ ಪಾಗುಂಟ ಬಿ. ರಾಮಯ್ಯ, ಸಂಘದ ವತಿಯಿಂದ 2017ರಿಂದ ನಿರಂತರವಾಗಿ ಗಾಂಧಿ ಜಯಂತಿ ಆಚರಿಸಿಕೊಂಡು ಬರಲಾಗುತ್ತಿದ್ದು, ಈ ಬಾರಿ 9ನೇ ವರ್ಷದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಗಾಂಧೀಜಿಯವರ ಪುತಳಿಗೆ ಮಾಲಾರ್ಪಣೆ ಮಾಡುವುದಷ್ಟೇ ಅವರಿಗೆ ಸಲ್ಲಿಸುವ ಗೌರವವಾಗಬಾರದು. ಅವರ ತತ್ವ, ಆದರ್ಶ ಮತ್ತು ಸೇವಾ ಮನೋಭಾವವನ್ನು ಅನುಸರಿಸಿ ದೇಶ, ನಾಡು ಹಾಗೂ ಸಮಾಜದ ಒಳಿತಿಗಾಗಿ ಕಾರ್ಯನಿರ್ವಹಿಸುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂದರು.

ಪ್ರಸ್ತುತ ಬರ ಪರಿಸ್ಥಿತಿಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಬೆಳೆಗಳಿಗೆ ಹಾನಿಯಾಗಿ ಆತಂಕ ಎದುರಿಸುತ್ತಿದ್ದಾರೆ. ನಾಡಿನಲ್ಲಿ ಉತ್ತಮ ಮಳೆಯಾಗಿ ರೈತರ ಸಂಕಷ್ಟ ದೂರವಾಗಲಿ ಎಂದು ಗಾಂಧೀಜಿಯವರ ಸ್ಮರಣೆಯೊಂದಿಗೆ ಸಮೀಪದ ಆಂಜನೇಯ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಜಯಂತಿ ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದ ಸಂಘದ ಎಲ್ಲ ಪದಾಧಿಕಾರಿಗಳು ಹಾಗೂ ಸದಸ್ಯರಿಗೆ ಅವರು ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ನಂದಿನಿ ವೆಂಕಟೇಶ, ಬಲ್ಲಟಗಿ ಜಯಪ್ರಕಾಶ, ಎನ್. ರವಿ, ಟಿ. ವೆಂಕಟೇಶ, ಅಶೋಕ ಕುಮಾರ, ಮೈಲಾಪೂರ ಆನಂದ, ದೇವಗಿರಿ ಸತೀಶ ಕುಮಾರ, ಕೆ. ಮಲ್ಕಾಜಯ್ಯ, ವೈ. ನರೇಂದ್ರ ಕುಮಾರ, ಕೆ. ವೀರೇಶ ಬಾಬು, ಕೆ. ವೀರ ಪ್ರಕಾಶ, ಕೆ. ವೆಂಕಟೇಶ, ವಿಶ್ವನಾಥ ವೆಂಕಟೇಶ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಶಾಸಕರ ಕಚೇರಿಯಲ್ಲಿ ಗಾಂಧೀಜಿಶಾಸ್ತ್ರಿ ಜಯಂತಿ ಆಚರಣೆ



ದೇವದುರ್ಗ, ಅ.2: ನಗರದ ಶಾಸಕರ ಕಾರ್ಯಾಲಯದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿಯನ್ನು ಶುಕ್ರವಾರ ಗೌರವಪೂರ್ವಕವಾಗಿ ಆಚರಿಸಲಾಯಿತು.

ಶಾಸಕಿ ಕರೆಮ್ಮ ಜಿ. ನಾಯಕ ಅವರು ಗಾಂಧೀಜಿ ಹಾಗೂ ಶಾಸ್ತ್ರಿ ಅವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಸಲ್ಲಿಸಿದರು. ಬಳಿಕ ಉಭಯ ಮಹನೀಯರ ಜೀವನ, ಸ್ವಾತಂತ್ರ್ಯ ಹೋರಾಟ, ದೇಶಸೇವೆ ಹಾಗೂ ಅವರು ಪ್ರತಿಪಾದಿಸಿದ ಮೌಲ್ಯಗಳನ್ನು ಸ್ಮರಿಸಲಾಯಿತು.

ಗಾಂಧೀಜಿಯವರ ಸತ್ಯ, ಅಹಿಂಸೆ ಮತ್ತು ಶಾಂತಿಯ ಸಂದೇಶ ಹಾಗೂ ಶಾಸ್ತ್ರಿಯವರ ಸರಳತೆ, ಪ್ರಾಮಾಣಿಕತೆ ಮತ್ತು ದೇಶಪ್ರೇಮದ ಆದರ್ಶಗಳು ಇಂದಿನ ಪೀಳಿಗೆಗೆ ಮಾರ್ಗದರ್ಶಕವಾಗಿವೆ ಎಂದು ಕಾರ್ಯಕ್ರಮದಲ್ಲಿ ಸ್ಮರಿಸಲಾಯಿತು.

ಈ ಸಂದರ್ಭದಲ್ಲಿ ಪಕ್ಷದ ಕೋರ್ ಕಮಿಟಿ ಅಧ್ಯಕ್ಷ ಶರಣಪ್ಪ ಬಳೆ, ಅಧ್ಯಕ್ಷ ಬಸನಗೌಡ ದೇಸಾಯಿ ವಕೀಲರು, ಮಹಿಳಾ ಘಟಕದ ಅಧ್ಯಕ್ಷೆ ರೇಣುಕಾ ಮಯೂರ್ ಸ್ವಾಮಿ, ಯುವ ಘಟಕದ ಅಧ್ಯಕ್ಷ ರಮೇಶ ರಾಮನಾಳ, ನಗರ ಘಟಕದ ಅಧ್ಯಕ್ಷ ಭೀಮಣ್ಣ ಗೋಸಲ್, ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಮಾಹೇಬೂಬ ಬುವಾಜಿ, ಹನುಮಂತರಾಯ ಚಿಂತಲಕುಂಟ, ಮುಖಂಡರಾದ ಈಶಪ್ಪ ಗೌಡ, ಸಮೀನ ಬೇಗಂ, ರವಿ ನಾಯಕ, ಅಶೋಕ್ ಓಣಿ, ಗೌರಿ ಗೋಪಾಲಕೃಷ್ಣ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮೆದುಳು ಜ್ವರ ತಡೆಗೆ ಮಕ್ಕಳಿಗೆ ಜೆ.ಇ. ಲಸಿಕೆ ಕಡ್ಡಾಯವಾಗಿ ಹಾಕಿಸಿ: ಡಾ. ಲಕ್ಷ್ಮಿ ಕನಕಿ



ಸಿಂಧನೂರು: ಮೆದುಳು ಜ್ವರದಂತಹ ಮಾರಕ ಕಾಯಿಲೆಯಿಂದ ಮಕ್ಕಳನ್ನು ರಕ್ಷಿಸಲು ಎರಡು ವರ್ಷದೊಳಗಿನ ಮಕ್ಕಳಿಗೆ ಸರ್ಕಾರದಿಂದ ಉಚಿತವಾಗಿ ನೀಡಲಾಗುವ ಜೆ.ಇ. ಲಸಿಕೆಯನ್ನು ತಪ್ಪದೇ ಹಾಕಿಸಬೇಕು ಎಂದು ಸಾಲಗುಂದ ಪ್ರಾಥಮಿಕ ಆರೋಗ್ಯ ಕೇಂದ್ರದ ಆಯುಷ್ ವೈದ್ಯಾಧಿಕಾರಿ ಡಾ. ಲಕ್ಷ್ಮಿ ಕನಕಿ ತಿಳಿಸಿದರು.

ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ತಾಲೂಕು ಆರೋಗ್ಯ ಇಲಾಖೆ ಸಿಂಧನೂರು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಸಾಲಗುಂದ ಇವರ ಸಂಯುಕ್ತ ಆಶ್ರಯದಲ್ಲಿ ಸಾಲಗುಂದ ಗ್ರಾಮದಲ್ಲಿ ಮೆದುಳು ಜ್ವರ ನಿಯಂತ್ರಣ ಕುರಿತು ಜಾಗೃತಿ ಕಾರ್ಯಕ್ರಮ ನಡೆಸಲಾಯಿತು. ರಾಷ್ಟ್ರೀಯ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ತಂಡ ಹಾಗೂ ಸರ್ವೇಕ್ಷಣಾ ತಂಡ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿತು.

ಸಮುದಾಯ ಮಟ್ಟದ ಶಿಕ್ಷಣಕ್ಕಾಗಿ ಆಗಮಿಸಿದ್ದ ಸನ್ ರೈಜ್ ಕಾಲೇಜಿನ ವಿದ್ಯಾರ್ಥಿಗಳೊಂದಿಗೆ ಗ್ರಾಮದ ವಿವಿಧ ಬಡಾವಣೆಗಳಿಗೆ ಭೇಟಿ ನೀಡಿದ ಆರೋಗ್ಯ ಇಲಾಖೆ ತಂಡವು ಸೊಳ್ಳೆಗಳ ಸಾಂದ್ರತೆ ಹಾಗೂ ಸೊಳ್ಳೆ ಉತ್ಪತ್ತಿಯಾಗುವ ಸ್ಥಳಗಳನ್ನು ಪರಿಶೀಲಿಸಿ, ಗ್ರಾಮಸ್ಥರಿಗೆ ರೋಗ ನಿಯಂತ್ರಣ ಕ್ರಮಗಳ ಕುರಿತು ಮಾಹಿತಿ ನೀಡಿತು.

ತಾಲೂಕು ವಿಬಿಡಿ ಮೇಲ್ವಿಚಾರಕ ಎಫ್.ಎ. ಹಣಗಿ ಮಾತನಾಡಿ, ತೀವ್ರ ಜ್ವರ, ತಲೆನೋವು, ಮಂಪರು, ಕುತ್ತಿಗೆ ಬಿಗಿತ, ಅಸಹಜ ವರ್ತನೆ ಹಾಗೂ ಕೈಕಾಲುಗಳ ಸ್ವಾಧೀನ ಕಳೆದುಕೊಳ್ಳುವಂತಹ ಲಕ್ಷಣಗಳು ಕಂಡುಬಂದಲ್ಲಿ ನಿರ್ಲಕ್ಷಿಸದೆ ತಕ್ಷಣ ವೈದ್ಯಕೀಯ ಚಿಕಿತ್ಸೆ ಪಡೆಯಬೇಕು ಎಂದು ತಿಳಿಸಿದರು. ಮೆದುಳು ಜ್ವರ ಹರಡುವ ಸೊಳ್ಳೆಗಳ ಉತ್ಪತ್ತಿ ಹಾಗೂ ಅವುಗಳಿಂದ ರಕ್ಷಿಸಿಕೊಳ್ಳುವ ವಿಧಾನಗಳ ಬಗ್ಗೆಯೂ ವಿವರಿಸಿದರು.

ಸಾಂಕ್ರಾಮಿಕ ರೋಗಶಾಸ್ತ್ರಜ್ಞ ನಿಖಿಲ್ ಹೊಸಮನಿ ಮಾತನಾಡಿ, ಮನೆ ಹಾಗೂ ಸುತ್ತಮುತ್ತ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು. ಸೊಳ್ಳೆ ಪರದೆಗಳನ್ನು ಬಳಸುವುದು, ಮೈತುಂಬ ಬಟ್ಟೆ ಧರಿಸುವುದು ಹಾಗೂ ಸೊಳ್ಳೆ ಕಡಿತದಿಂದ ರಕ್ಷಿಸಿಕೊಳ್ಳುವ ಕ್ರಮಗಳನ್ನು ಅನುಸರಿಸುವ ಮೂಲಕ ರೋಗ ಹರಡುವ ಅಪಾಯವನ್ನು ಕಡಿಮೆ ಮಾಡಬಹುದು ಎಂದರು.

ಡಾ. ಲಕ್ಷ್ಮಿ ಕನಕಿ ಮಾತನಾಡಿ, ರೋಗ ನಿಯಂತ್ರಣದಲ್ಲಿ ಸಾರ್ವಜನಿಕರ ಸಹಭಾಗಿತ್ವ ಅತ್ಯಂತ ಮುಖ್ಯವಾಗಿದೆ. ಮಕ್ಕಳಿಗೆ ನಿಗದಿತ ಸಮಯದಲ್ಲಿ ಜೆ.ಇ. ಸೇರಿದಂತೆ ಅಗತ್ಯ ಲಸಿಕೆಗಳನ್ನು ಹಾಕಿಸುವುದರ ಜೊತೆಗೆ ಪರಿಸರ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಸಣ್ಣ ನಿರ್ಲಕ್ಷ್ಯವೂ ಮಕ್ಕಳ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇರುವುದರಿಂದ ಪೋಷಕರು ಲಸಿಕಾಕರಣದ ಬಗ್ಗೆ ನಿರ್ಲಕ್ಷ್ಯ ವಹಿಸಬಾರದು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಸೈಫ್ ಖಾನ್, ಹಿರಿಯ ಪಿಎಚ್‌ಸಿಓ ಕಸ್ತೂರಿ ಭೈರಮಟ್ಟಿ, ಪಿಎಚ್‌ಸಿಓ ಅಂಬಮ್ಮ, ಆಶಾ ಕಾರ್ಯಕರ್ತೆಯರಾದ ಲಕ್ಷ್ಮಿ, ಫಾತಿಮಾ, ಅನ್ನಪೂರ್ಣ, ಲಕ್ಷ್ಮಿ ಎಚ್., ಆಂಜನೇಯ, ಹಾಜರಾ ಬೇಗಂ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ತಾಯಿಮಕ್ಕಳ ಆಸ್ಪತ್ರೆಯಲ್ಲಿ ಗಾಂಧೀಜಿಶಾಸ್ತ್ರಿ ಜಯಂತಿ ಆಚರಣೆ



ರಾಯಚೂರು: ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿಯನ್ನು ಆಚರಿಸಿ, ಉಭಯ ಮಹನೀಯರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲೂಕು ವೈದ್ಯಾಧಿಕಾರಿ ಡಾ. ಸತೀಶ ಮಾತನಾಡಿ, ಗಾಂಧೀಜಿಯವರ ಸತ್ಯ, ಅಹಿಂಸೆ, ಸರಳತೆ ಮತ್ತು ಶಾಂತಿಯ ತತ್ವಗಳು ಇಂದಿಗೂ ಸಮಾಜಕ್ಕೆ ಮಾರ್ಗದರ್ಶಕವಾಗಿವೆ. ಅವರ ಆದರ್ಶಗಳನ್ನು ಕೇವಲ ಸ್ಮರಣೆಗೆ ಸೀಮಿತಗೊಳಿಸದೆ ಸ್ವಚ್ಛತೆ, ಸತ್ಯ ಮತ್ತು ಪರಸ್ಪರ ಗೌರವವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಅತಿಥಿ ವಿಜಯ ಶಿಂದೆ ಮಾತನಾಡಿ, ಲಾಲ್ ಬಹದ್ದೂರ್ ಶಾಸ್ತ್ರಿ ಸರಳತೆ ಮತ್ತು ಪ್ರಾಮಾಣಿಕತೆಗೆ ಮಾದರಿಯಾಗಿದ್ದರು. ಅವರ ಜೈ ಜವಾನ್, ಜೈ ಕಿಸಾನ್ ಘೋಷಣೆ ದೇಶದ ರಕ್ಷಣೆಯಲ್ಲಿ ಸೈನಿಕರು ಹಾಗೂ ಆಹಾರ ಉತ್ಪಾದನೆಯಲ್ಲಿ ರೈತರ ಮಹತ್ವವನ್ನು ಸಾರುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿಗಳು, ನರ್ಸಿಂಗ್ ಮತ್ತು ಫಾರ್ಮಸಿ ಅಧಿಕಾರಿಗಳು, ಡಾಟಾ ಎಂಟ್ರಿ ಸಿಬ್ಬಂದಿ, ಗ್ರೂಪ್ -ಡಿ ನೌಕರರು ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಗಾಂಧೀಜಿ ತತ್ವಗಳು ಪ್ರತಿಯೊಬ್ಬರಿಗೂ ಆದರ್ಶ: ಆರ್. ಮುತ್ತುರಾಜ್ ಶೆಟ್ಟಿ



ಮಾನ್ವಿ: ಪಟ್ಟಣದ ಸಿಂಧನೂರು ರಸ್ತೆಯಲ್ಲಿರುವ ಮಹಾತ್ಮ ಗಾಂಧಿ ವೃತ್ತದಲ್ಲಿ ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದ ವತಿಯಿಂದ ಮಹಾತ್ಮ ಗಾಂಧೀಜಿ ಜಯಂತಿಯನ್ನು ಗೌರವಪೂರ್ವಕವಾಗಿ ಆಚರಿಸಲಾಯಿತು.

ಸಂಘದ ತಾಲೂಕು ಅಧ್ಯಕ್ಷ ಆರ್. ಮುತ್ತುರಾಜ್ ಶೆಟ್ಟಿ ಅವರು ಮಹಾತ್ಮ ಗಾಂಧೀಜಿಯವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಸಲ್ಲಿಸಿದರು.

ಬಳಿಕ ಮಾತನಾಡಿದ ಅವರು, ಮಹಾತ್ಮ ಗಾಂಧೀಜಿ ತಮ್ಮ ಜೀವನವನ್ನು ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ಮುಡಿಪಾಗಿಟ್ಟ ಮಹಾನ್ ನಾಯಕರು. ಅವರು ಪ್ರತಿಪಾದಿಸಿದ ಶಾಂತಿ, ಅಹಿಂಸೆ, ತ್ಯಾಗ ಮತ್ತು ಸೇವಾ ಮನೋಭಾವ ಪ್ರತಿಯೊಬ್ಬರಿಗೂ ಆದರ್ಶಪ್ರಾಯವಾಗಿದ್ದು, ಅವರ ಜೀವನ ಮೌಲ್ಯಗಳನ್ನು ಇಂದಿನ ಪೀಳಿಗೆ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದ ಕಾರ್ಯದರ್ಶಿ ಬಿ. ಈರಣ್ಣ ಶೆಟ್ಟಿ, ಪದಾಧಿಕಾರಿಗಳಾದ ಕೆ. ನವೀನ್ ಕುಮಾರ್, ರಾಘವೇಂದ್ರ ಶೆಟ್ಟಿ, ಪವನ್ ಕುಮಾರ್, ವೀರಣ್ಣ, ಮಾಜಿ ಪುರಸಭೆ ಸದಸ್ಯ ಶರಣಪ್ಪ ಮೇದಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಶಿಯಾ ತಲಾಬ್ ನಿವಾಸಿಗಳ ಸಮಸ್ಯೆ ಆಲಿಸಿದ ಜೆಡಿಎಸ್ ಮುಖಂಡ ರಾಮನಗೌಡ ಏಗನೂರು



ರಾಯಚೂರು: ನಗರದ ಶಿಯಾ ತಲಾಬ್ ವ್ಯಾಪ್ತಿಯ ವಾರ್ಡ್ ನಂ.30 ಹಾಗೂ 31ಕ್ಕೆ ಜೆಡಿಎಸ್ ಮುಖಂಡ ರಾಮನಗೌಡ ಏಗನೂರು ಭೇಟಿ ನೀಡಿ, ಅಲ್ಲಿನ ನಿವಾಸಿಗಳು ಎದುರಿಸುತ್ತಿರುವ ವಸತಿ, ರಸ್ತೆ, ಚರಂಡಿ ಹಾಗೂ ಬೀದಿ ದೀಪ ಸೇರಿದಂತೆ ವಿವಿಧ ಮೂಲಸೌಕರ್ಯ ಸಮಸ್ಯೆಗಳನ್ನು ಪರಿಶೀಲಿಸಿದರು.

ವಾರ್ಡ್ ನಂ.30ರಲ್ಲಿ ಅತ್ಯಂತ ಸಣ್ಣ ಜಾಗದಲ್ಲಿ ನಿರ್ಮಿಸಿರುವ ತಗಡಿನ ಶೆಡ್ ಗಳಲ್ಲಿ ವಾಸಿಸುತ್ತಿರುವ ಕುಟುಂಬಗಳನ್ನು ಭೇಟಿ ಮಾಡಿದ ಅವರು, ಸ್ಥಳೀಯರಿಂದ ಸಮಸ್ಯೆಗಳ ಕುರಿತು ಮಾಹಿತಿ ಪಡೆದರು. 1010 ಅಡಿಗಿಂತಲೂ ಕಡಿಮೆ ವಿಸ್ತೀರ್ಣದ ಶೆಡ್‌ಗಳಲ್ಲಿ ಕುಟುಂಬಗಳು ವಾಸಿಸುತ್ತಿದ್ದು, ಮೂಲಸೌಕರ್ಯಗಳ ಕೊರತೆಯಿಂದ ಸಂಕಷ್ಟ ಎದುರಿಸುತ್ತಿರುವುದಾಗಿ ನಿವಾಸಿಗಳು ಅಳಲು ತೋಡಿಕೊಂಡರು.

ಸ್ಥಳೀಯ ಮಹಿಳೆಯೊಬ್ಬರು ಮಾತನಾಡಿ, ಸುಮಾರು ಐದು ವರ್ಷಗಳ ಹಿಂದೆ ವರ್ಧಮಾನ ಶಾಲೆ ಎದುರಿನ ಬಡಾವಣೆಯಲ್ಲಿ ವಾಸಿಸುತ್ತಿದ್ದ ಸಂದರ್ಭದಲ್ಲಿ ಮಳೆಯಿಂದ ಗೋಡೆ ಕುಸಿದು ವ್ಯಕ್ತಿಯೊಬ್ಬರು ಮೃತಪಟ್ಟಿದ್ದರು. ಆ ಬಳಿಕ ತಾತ್ಕಾಲಿಕವಾಗಿ ಎರಡು ವರ್ಷಗಳವರೆಗೆ ತಗಡಿನ ಶೆಡ್‌ಗಳಲ್ಲಿ ವಾಸಿಸಲು ವ್ಯವಸ್ಥೆ ಮಾಡಿ, ನಂತರ ಮೂಲ ಸ್ಥಳದಲ್ಲಿ ಅಪಾರ್ಟ್‌ಮೆಂಟ್ ನಿರ್ಮಿಸಿ ಮನೆ ನೀಡುವುದಾಗಿ ಭರವಸೆ ನೀಡಲಾಗಿತ್ತು. ಆದರೆ ಐದು ವರ್ಷ ಕಳೆದರೂ ಶಾಶ್ವತ ವಸತಿ ಸೌಲಭ್ಯ ದೊರೆತಿಲ್ಲ ಎಂದು ಆರೋಪಿಸಿದರು.

ತಗಡಿನ ಶೆಡ್‌ಗಳಲ್ಲಿ ಸ್ನಾನ, ಅಡುಗೆ, ಪೂಜೆ ಹಾಗೂ ಮಲಗುವುದು ಸೇರಿದಂತೆ ಎಲ್ಲ ಚಟುವಟಿಕೆಗಳನ್ನೂ ಒಂದೇ ಸಣ್ಣ ಜಾಗದಲ್ಲಿ ನಡೆಸಬೇಕಾಗಿದೆ. ಸುತ್ತಮುತ್ತ ಕೊಳಚೆ ನೀರು ನಿಲ್ಲುವುದರಿಂದ ಹಾವು, ಚೇಳು ಸೇರಿದಂತೆ ವಿಷಜಂತುಗಳ ಭಯವೂ ಇದೆ. ವಿದ್ಯುತ್ ಅವಘಡಗಳಿಂದ ಜೀವಹಾನಿ ಹಾಗೂ ಗಾಯಗಳೂ ಸಂಭವಿಸಿವೆ ಎಂದು ನಿವಾಸಿಗಳು ರಾಮನಗೌಡ ಏಗನೂರು ಅವರ ಗಮನಕ್ಕೆ ತಂದರು.

ವಯಸ್ಸಿಗೆ ಬಂದ ಹೆಣ್ಣುಮಕ್ಕಳಿರುವ ಕುಟುಂಬಗಳಿಗೆ ಸೂಕ್ತ ವಸತಿ ಇಲ್ಲದಿರುವುದು ಮತ್ತಷ್ಟು ಸಂಕಷ್ಟ ತಂದೊಡ್ಡಿದೆ. ಚುನಾವಣೆ ಸಂದರ್ಭದಲ್ಲಿ ಜನಪ್ರತಿನಿಧಿಗಳು ಸೌಲಭ್ಯ ಕಲ್ಪಿಸುವ ಭರವಸೆ ನೀಡುತ್ತಾರೆ. ಆದರೆ ಚುನಾವಣೆ ಮುಗಿದ ಬಳಿಕ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂದು ಸ್ಥಳೀಯರು ಅಸಮಾಧಾನ ವ್ಯಕ್ತಪಡಿಸಿದರು.

ಬಳಿಕ ವಾರ್ಡ್ ನಂ.31ರ ಆಟೋ ನಗರಕ್ಕೆ ಭೇಟಿ ನೀಡಿದ ರಾಮನಗೌಡ ಏಗನೂರು ಅಲ್ಲಿನ ರಸ್ತೆ ಮತ್ತು ಬೀದಿ ದೀಪಗಳ ಸ್ಥಿತಿಯನ್ನು ವೀಕ್ಷಿಸಿದರು. ರಸ್ತೆ ಅಭಿವೃದ್ಧಿಗೆ ಭೂಮಿಪೂಜೆ ನಡೆದಿದ್ದರೂ ಕಾಮಗಾರಿ ಪೂರ್ಣಗೊಂಡಿಲ್ಲ. ಮಳೆ ಬಂದಾಗ ರಸ್ತೆಗಳಲ್ಲಿ ಮೊಣಕಾಲು ಮಟ್ಟದವರೆಗೆ ನೀರು ನಿಲ್ಲುವುದರಿಂದ ವಾಹನ ಸಂಚಾರದ ಜೊತೆಗೆ ಸ್ಥಳೀಯ ಮೆಕ್ಯಾನಿಕ್ ಅಂಗಡಿಗಳಿಗೂ ತೊಂದರೆಯಾಗುತ್ತಿದೆ ಎಂದು ನಿವಾಸಿಗಳು ದೂರಿದರು.

ಬೀದಿ ದೀಪದ ಕಂಬಗಳಿದ್ದರೂ ದೀಪಗಳು ಕಾರ್ಯನಿರ್ವಹಿಸುತ್ತಿಲ್ಲ. ಇದರಿಂದ ರಾತ್ರಿ ವೇಳೆ ಪ್ರದೇಶ ಕತ್ತಲಲ್ಲಿ ಮುಳುಗುತ್ತಿದ್ದು, ರಸ್ತೆಗಳಲ್ಲಿ ಧೂಳಿನ ಸಮಸ್ಯೆಯೂ ಹೆಚ್ಚಾಗಿದೆ. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಸಮರ್ಪಕ ಸ್ಪಂದನೆ ದೊರೆತಿಲ್ಲ ಎಂದು ಸ್ಥಳೀಯರು ಆರೋಪಿಸಿದರು.

ಈ ಸಂದರ್ಭದಲ್ಲಿ ಆದಿರಾಜ್ ಉಪ್ಪಾರ, ವೀರೇಶ ಹಾಗೂ ರಾಜೀವ ಬಡಾವಣೆಯ ಸಾರ್ವಜನಿಕರು, ಮಹಿಳೆಯರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗಾಂಧೀಜಿಶಾಸ್ತ್ರಿ ಆದರ್ಶಗಳು ವಿದ್ಯಾರ್ಥಿಗಳಿಗೆ ದಾರಿದೀಪ: ಬಸವರಾಜ ಬಾದರ್ಲಿ



ಸಿಂಧನೂರು, ಅ.2: ಸತ್ಯ ಮತ್ತು ಅಹಿಂಸೆಯನ್ನು ಬದುಕಿನ ಮೂಲಮಂತ್ರವನ್ನಾಗಿಸಿಕೊಂಡು ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹಾತ್ಮ ಗಾಂಧೀಜಿಯವರ ಜೀವನ, ಚಿಂತನೆ ಮತ್ತು ಹೋರಾಟ ಪ್ರತಿಯೊಬ್ಬರಿಗೂ ಆದರ್ಶವಾಗಿದೆ ಎಂದು ಶಾಲಾ ಅಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಬಸವರಾಜ ಬಾದರ್ಲಿ ಹೇಳಿದರು.

ನಗರದ ಪಿಎಂ ಶ್ರೀ ಆದರ್ಶ ವಿದ್ಯಾಲಯದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗಾಂಧೀಜಿಯವರ ಸತ್ಯ, ಅಹಿಂಸೆ ಮತ್ತು ಶಾಂತಿಯ ಸಂದೇಶ ಜಗತ್ತಿನಾದ್ಯಂತ ಪ್ರಭಾವ ಬೀರಿದೆ. ಸ್ವಾತಂತ್ರ್ಯ ಚಳವಳಿಯ ಸಂದರ್ಭದಲ್ಲಿ ಅವರ ಕರೆಗೆ ದೇಶದ ಜನತೆ ಒಗ್ಗೂಡಿ ಸ್ಪಂದಿಸುತ್ತಿದ್ದರು. ವಿದ್ಯಾರ್ಥಿಗಳು ಮಹನೀಯರ ಜೀವನ ಮೌಲ್ಯಗಳನ್ನು ಅರಿತು, ಉತ್ತಮ ಗುಣಗಳನ್ನು ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡು ಸಮಾಜ ಮತ್ತು ದೇಶದ ಪ್ರಗತಿಗೆ ಕೊಡುಗೆ ನೀಡಬೇಕು ಎಂದರು.

ಪ್ರಭಾರಿ ಮುಖ್ಯೋಪಾಧ್ಯಾಯ ವೀರೇಶ ಗೋನವಾರ ಮಾತನಾಡಿ, ಅಕ್ಟೋಬರ್ 2ನ್ನು ಜಗತ್ತಿನಾದ್ಯಂತ ಅಂತರರಾಷ್ಟ್ರೀಯ ಅಹಿಂಸಾ ದಿನವನ್ನಾಗಿ ಆಚರಿಸಲಾಗುತ್ತಿದೆ. ವಿದ್ಯಾರ್ಥಿಗಳು ಗಾಂಧೀಜಿಯವರ ಆತ್ಮಚರಿತ್ರೆ ಓದುವ ಮೂಲಕ ಅವರ ಜೀವನ, ಹೋರಾಟ ಮತ್ತು ಸಾಮಾಜಿಕ ಕಾಳಜಿಯನ್ನು ಅರಿತುಕೊಳ್ಳಬೇಕು. ಸ್ವಚ್ಛತೆಗೆ ಆದ್ಯತೆ ನೀಡುವುದರ ಜೊತೆಗೆ ಸಮಾಜದ ದುರ್ಬಲ ವರ್ಗಗಳ ಸೇವೆಯಲ್ಲಿಯೂ ಗಾಂಧೀಜಿ ತೊಡಗಿಸಿಕೊಂಡಿದ್ದರು ಎಂದು ತಿಳಿಸಿದರು.

ಕನ್ನಡ ಭಾಷಾ ಶಿಕ್ಷಕ ಭೀಮರೆಡ್ಡಿ ಮಾತನಾಡಿ, ಸ್ವಾತಂತ್ರ್ಯ ಹೋರಾಟದಲ್ಲಿ ಗಾಂಧೀಜಿ ನೀಡಿದ ಕೊಡುಗೆ ಹಾಗೂ ಸರಳತೆ ಮತ್ತು ಪ್ರಾಮಾಣಿಕತೆಯಿಂದ ಗುರುತಿಸಿಕೊಂಡ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜೀವನದ ವಿವಿಧ ಘಟನೆಗಳನ್ನು ವಿದ್ಯಾರ್ಥಿಗಳಿಗೆ ವಿವರಿಸಿದರು.

ಎಸ್‌ಡಿಎಂಸಿ ಸದಸ್ಯ ಮಲ್ಲಿಕಾರ್ಜುನ ಹಿರೇಮಠ ಮಾತನಾಡಿ, ಮಹನೀಯರ ಆದರ್ಶಗಳನ್ನು ಅನುಸರಿಸುವುದರೊಂದಿಗೆ ವಿದ್ಯಾರ್ಥಿಗಳು ಗುರುಗಳ ಬಗ್ಗೆ ಗೌರವ ಮತ್ತು ನಂಬಿಕೆ ಬೆಳೆಸಿಕೊಂಡು ಶಿಕ್ಷಣದಲ್ಲಿ ಮುನ್ನಡೆಯಬೇಕು ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಗಣಿತ ಶಿಕ್ಷಕ ಸಾವನ್ ಕೆ. ಅವರು ★★ಗಾಂಧಿ ಅಲ್ಲದೆ ಇನ್ಯಾರು?★★ ಎಂಬ ತಮ್ಮ ಸ್ವರಚಿತ ಗಜಲ್ ವಾಚಿಸಿದರು. ಎಂಟನೇ ತರಗತಿ ವಿದ್ಯಾರ್ಥಿನಿಯರಾದ ಶ್ರೀರಕ್ಷಾ ಹಾಗೂ ಭುವನೇಶ್ವರಿ ಗಾಂಧೀಜಿ ಮತ್ತು ಶಾಸ್ತ್ರಿ ಅವರ ಕುರಿತು ಮಾತನಾಡಿದರು. ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಪೋಷಕರು ರಘುಪತಿ ರಾಘವ ರಾಜಾರಾಮ್ ಭಜನೆಯನ್ನು ಸಾಮೂಹಿಕವಾಗಿ ಹಾಡಿದರು.

ಜಯಂತಿ ಅಂಗವಾಗಿ ಶಾಲಾ ಆವರಣ ಹಾಗೂ ಸುತ್ತಮುತ್ತ ಸ್ವಚ್ಛತಾ ಶ್ರಮದಾನ ನಡೆಸಲಾಯಿತು. ಎಸ್‌ಡಿಎಂಸಿ ಸದಸ್ಯ ಮೌಲಾಸಾಬ್, ಶಿಕ್ಷಕರಾದ ಕೆ. ಮಲ್ಲಪ್ಪ, ಬಸವರಾಜ ಆನೆಗುಂದಿ, ಮೌನೇಶಪ್ಪ, ಉಮೇಶ, ಜಡೇಶ, ಶಾರದಮ್ಮ, ಅಕ್ಕಮಹಾದೇವಿ ಸೇರಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಪೋಷಕರು ಪಾಲ್ಗೊಂಡಿದ್ದರು.

# ಸ್ವಚ್ಛತೆ ಜೀವನದ ಅವಿಭಾಜ್ಯ ಅಂಗವಾಗಲಿ: ಜಿ. ಮಲ್ಲಿಕಾರ್ಜುನ್



ರಾಯಚೂರು, ಅ.2: ಆರೋಗ್ಯಕರ ಜೀವನಕ್ಕೆ ಸ್ವಚ್ಛ ಪರಿಸರ ಅತ್ಯಗತ್ಯವಾಗಿದ್ದು, ಸ್ವಚ್ಛತೆಯನ್ನು ಪ್ರತಿಯೊಬ್ಬರೂ ತಮ್ಮ ದೈನಂದಿನ ಬದುಕಿನ ಅವಿಭಾಜ್ಯ ಅಂಗವನ್ನಾಗಿ ಮಾಡಿಕೊಳ್ಳಬೇಕು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ. ಮಲ್ಲಿಕಾರ್ಜುನ್ ಹೇಳಿದರು.

ನಗರದ ಕೆಇಬಿ ಕಾಲೊನಿಯ ಪಿಎಂ ಶ್ರೀ ಶಾಲೆಯಲ್ಲಿ ಗಾಂಧಿ ಜಯಂತಿ ಅಂಗವಾಗಿ ಹಮ್ಮಿಕೊಂಡಿದ್ದ ಶ್ರಮದಾನ ಕಾರ್ಯಕ್ರಮಕ್ಕೆ ಸ್ವಚ್ಛತಾ ಕಾರ್ಯದಲ್ಲಿ ಪಾಲ್ಗೊಳ್ಳುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಮಹಾತ್ಮ ಗಾಂಧೀಜಿಯವರ ಸತ್ಯ, ಅಹಿಂಸೆ, ಶ್ರಮ ಮತ್ತು ಸ್ವಚ್ಛತೆಯ ಆದರ್ಶಗಳನ್ನು ಕೇವಲ ಸ್ಮರಿಸಿದರೆ ಸಾಲದು, ಅವುಗಳನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ನಮ್ಮ ಕೆಲಸವನ್ನು ನಾವೇ ಮಾಡಿಕೊಳ್ಳುವ ಮನೋಭಾವ ಬೆಳೆಸಿಕೊಂಡು ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಸಮಾಜಕ್ಕೆ ನೀಡುವ ಮಹತ್ವದ ಕೊಡುಗೆಯಾಗಿದೆ ಎಂದರು.

ಗಾಂಧಿ ಜಯಂತಿ ಅಂಗವಾಗಿ ಜಿಲ್ಲೆಯ ವಿವಿಧ ಶಾಲೆಗಳಲ್ಲಿ ಶ್ರಮದಾನ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ಶಾಲಾ ಆವರಣಗಳ ಸ್ವಚ್ಛತೆ ಹಾಗೂ ಗಿಡಮರಗಳ ಬೆಳೆಸುವಿಕೆಗೆ ಒತ್ತು ನೀಡಲಾಗುತ್ತಿದೆ. ಶಾಲೆಗಳಲ್ಲಿ ಆರೋಗ್ಯಕರ ಮತ್ತು ಹಸಿರು ವಾತಾವರಣ ನಿರ್ಮಿಸಲು ಶಿಕ್ಷಕರು, ಪಾಲಕರು, ವಿದ್ಯಾರ್ಥಿಗಳೊಂದಿಗೆ ಸಮುದಾಯದ ಸಹಭಾಗಿತ್ವವೂ ಅಗತ್ಯವಾಗಿದೆ ಎಂದು ತಿಳಿಸಿದರು.

ನಮ್ಮ ಶಾಲೆ ಸುಂದರ ವನವಾಗಬೇಕಾದರೆ ಎಲ್ಲರ ಪರಿಶ್ರಮ ಅಗತ್ಯ. ಒಂದು ಕೈಯಿಂದ ಚಪ್ಪಾಳೆ ತಟ್ಟಲು ಸಾಧ್ಯವಿಲ್ಲ. ಅದೇ ರೀತಿ ಶಾಲೆಯ ಅಭಿವೃದ್ಧಿಗೂ ಎಲ್ಲರ ಸಹಕಾರ ಮುಖ್ಯ ಎಂದು ಹೇಳಿದ ಅವರು, ಮಕ್ಕಳಲ್ಲಿ ಶ್ರಮದಾನದ ಮಹತ್ವವನ್ನು ಬೆಳೆಸಿದರೆ ತಮ್ಮ ಶಾಲೆಯನ್ನು ದೇಗುಲದಂತೆ ಕಾಣುವ ಮನೋಭಾವ ಮೂಡುತ್ತದೆ ಎಂದರು.

ಕಾಯಕವೇ ಕೈಲಾಸ ಎಂಬ ಬಸವಣ್ಣನವರ ತತ್ವವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿಯಂದು ಅವರ ಆದರ್ಶಗಳಿಗೆ ಅನುಗುಣವಾಗಿ ನಾವು ಕಾರ್ಯಪ್ರವೃತ್ತರಾದಾಗ ಮಕ್ಕಳು ಸಹ ಅದನ್ನು ಅನುಸರಿಸುತ್ತಾರೆ ಎಂದು ಹೇಳಿದರು.

ಸಾಂಕೇತಿಕವಾಗಿ ಸಸಿಗಳನ್ನು ನೆಡುವುದಕ್ಕೆ ಮಾತ್ರ ಕಾರ್ಯಕ್ರಮ ಸೀಮಿತವಾಗಬಾರದು. ನೆಟ್ಟ ಸಸಿಗಳ ಪಾಲನೆ ಮತ್ತು ಪೋಷಣೆಯ ಜವಾಬ್ದಾರಿಯನ್ನು ವಿದ್ಯಾರ್ಥಿಗಳಿಗೆ ನೀಡುವುದರಿಂದ ಅವರಲ್ಲಿ ಪರಿಸರ ಕಾಳಜಿ ಹಾಗೂ ಶ್ರಮದಾನದ ಅರಿವು ಬೆಳೆಯುತ್ತದೆ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಡಾ. ಈರಣ್ಣ ಕೋಸಗಿ, ಎಸ್‌ಡಿಎಂಸಿ ಅಧ್ಯಕ್ಷ ನಾಗೇಂದ್ರಪ್ಪ, ಮುಖ್ಯ ಶಿಕ್ಷಕಿ ಶಶಿಕಲಾ, ಪ್ರೌಢಶಾಲೆಯ ಮುಖ್ಯ ಶಿಕ್ಷಕ ರಾಜಶೇಖರ್ ಪಾಟೀಲ್, ಶಿಕ್ಷಣ ಸಂಯೋಜಕರಾದ ರಾಮಕೃಷ್ಣ ಕಟ್ಟಾವಲಿ, ಮಂಜುನಾಥ, ರಾಘವೇಂದ್ರ, ಶಿಕ್ಷಕರಾದ ವೆಂಕಟೇಶ ಜಾಲಿಬೆಂಚಿ, ಉರುಕುಂದ ನರಸಿಂಹರಾಜ, ನೀರಜ್, ದೇವರಾಜ್, ಸುನಂದಾ ಹಾಗೂ ಸಿಆರ್‌ಪಿ ಸುರೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸಾರ್ವಜನಿಕರಿಗೆ ಮೌಲ್ಯಯುತ ಸೇವೆ ಒದಗಿಸಿ: ಸಿದ್ರಾಮೇಶ್ವರ



ಕೊಪ್ಪಳ, (ಕರ್ನಾಟಕ ವಾರ್ತೆ): ಸಾರ್ವಜನಿಕರಿಗೆ ಅಗತ್ಯ ಸಹಕಾರ ನೀಡುತ್ತಾ, ಮೌಲ್ಯಯುತ ಸೇವೆ ಒದಗಿಸಿ ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ಹೇಳಿದರು.

ಗುರುವಾರದಂದು ನೂತನವಾಗಿ ಆರಂಭವಾದ ಕೊಪ್ಪಳ ಜಿಲ್ಲೆಯ ಮೊದಲ ಆಧಾರ್ ಸೇವಾ ಕೇಂದ್ರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಹುತೇಕ ಗ್ರಾಮೀಣ ಭಾಗದ ಜನರೇ ಕೇಂದ್ರಕ್ಕೆ ಆಗಮಿಸುವುದರಿಂದ ಅವರೊಂದಿಗೆ ಸೌಜನ್ಯದಿಂದ ವರ್ತಿಸಿ, ಅಗತ್ಯ ಸಹಕಾರ ನೀಡಿ. ಸರ್ಕಾರದಿಂದ ನಿಗದಿಯಾದ ಸೇವೆ ಆಧಾರಿತ ಶುಲ್ಕವನ್ನು ಭರಿಸಿಕೊಂಡು ಸಾರ್ವಜನಿಕರಿಗೆ ಸೇವೆ ಒದಗಿಸಿ. ಕೇಂದ್ರಕ್ಕೆ ಆಗಮಿಸುವ ಹಿರಿಯ ನಾಗರಿಕರು, ವಿಕಲಚೇತನರು, ಗರ್ಭಿಣಿ ಮಹಿಳೆಯರು, ಶಿಶುಗಳೊಂದಿಗೆ ಬರುವ ತಾಯಂದಿರಿಗೆ ಆದ್ಯತೆ ಮೇರೆಗೆ ಸೇವೆ ಒದಗಿಸಿ, ಗೌರವಯುತವಾಗಿ ವರ್ತಿಸಿ ಎಂದು ಅವರು ಹೇಳಿದರು. ನಂತರ ಕೇಂದ್ರದ ಕಾರ್ಯವೈಖರಿಯ ಬಗ್ಗೆ ಕೇಂದ್ರದ ಮುಖ್ಯಸ್ಥರೊಂದಿಗೆ ಚರ್ಚಿಸಿದರು.

ಈ ಸಂದರ್ಭದಲ್ಲಿ ಬಿಎಲ್‌ಎಸ್ ನ ಪ್ರಾದೇಶಿಕ ವ್ಯವಸ್ಥಾಪಕ ನರೇಶ್, ಯುಐಡಿಎಐ ಬೆಂಗಳೂರಿನ ಪ್ರಾದೇಶಿಕ ಕಚೇರಿಯ ಸಹಾಯಕ ವ್ಯವಸ್ಥಾಪಕ ಚೇತನ್, ಸೀನಿಯರ್ ಅಕೌಂಟ್ ಅಧಿಕಾರಿ ರಮೇಶ್ ಕಟುಕಮ್, ಆಧಾರ್ ಸೇವಾ ಕೇಂದ್ರದ ವ್ಯವಸ್ಥಾಪಕ ರಮೇಶ್ ಸೇರಿದಂತೆ, ಕೇಂದ್ರದ ಸಿಬ್ಬಂದಿ, ಸಾರ್ವಜನಿಕರು ಉಪಸ್ಥಿತರಿದ್ದರು.

ಆಧಾರ್ ಸೇವಾ ಕೇಂದ್ರದ ಪರಿಚಯ:

ಜಿಲ್ಲೆಯಲ್ಲಿ ನೂತನವಾಗಿ ಆರಂಭವಾದ ಆಧಾರ್ ಸೇವಾ ಕೇಂದ್ರವು ಜಿಲ್ಲೆಯ ಮೊದಲ ಎಎಸ್‌ಕೆ ಕೇಂದ್ರವಾಗಿದ್ದು, ರಾಜ್ಯದಲ್ಲಿ 19ನೇ ಕೇಂದ್ರವಾಗಿ ಆರಂಭಗೊಂಡಿದೆ. ಜಿಲ್ಲೆಯ ಇತರ ಭಾಗಗಳಲ್ಲಿ ಹಂತ ಹಂತವಾಗಿ ಎಎಸ್‌ಕೆ ಕೇಂದ್ರಗಳನ್ನು ಆರಂಭಿಸುವ ಯೋಜನೆ ಇದೆ. ನೂತನ ಆಧಾರ್ ಸೇವಾ ಕೇಂದ್ರವು ಕೊಪ್ಪಳದ ಗಂಜ್ ವೃತ್ತದ ಕುಷ್ಟಗಿ ರಸ್ತೆಯ ಮೇಲ್ಸೇತುವೆ ಕೆಳಗೆ ಬರುವ ಬಜಾಜ್ ಶೋ ರೂಂ ಪಕ್ಕದ ಕೊತ್ಬಾಳ ಕಟ್ಟಡದ ನೆಲಮಹಡಿಯಲ್ಲಿದೆ. ಗಂಜ್ ವೃತ್ತಕ್ಕೆ ಹತ್ತಿರವಾಗಿರುವುದರಿಂದ ಸಾರ್ವಜನಿಕರಿಗೆ ಕೇಂದ್ರಕ್ಕೆ ಆಗಮಿಸಲು ಅನುಕೂಲವಾಗಲಿದೆ. ಸಾರ್ವಜನಿಕರು ಸರ್ಕಾರ ನಿಗದಿಪಡಿಸಿದ ಸೇವೆ ಆಧಾರಿತ ಶುಲ್ಕವನ್ನು ಮಾತ್ರ ಭರಿಸಬೇಕು. ಕೇಂದ್ರವು ಮುಖ್ಯವಾಗಿ ಒಟ್ಟು 4 ಕೌಂಟರ್‌ಗಳನ್ನು ಒಳಗೊಂಡಿದೆ. ಇದರೊಂದಿಗೆ ಟೋಕನ್ ಕೌಂಟರ್, ಕ್ಯಾಶ್ ಕೌಂಟರ್ ಪ್ರತ್ಯೇಕವಾಗಿದ್ದು, ಪುರುಷ ಮತ್ತು ಮಹಿಳೆಯರಿಗೆ ಪ್ರತ್ಯೇಕ ಶೌಚಾಲಯ ವ್ಯವಸ್ಥೆ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಸಾರ್ವಜನಿಕರಿಗೆ ಕುಳಿತುಕೊಳ್ಳಲು ಆಸನ ವ್ಯವಸ್ಥೆಯನ್ನು ಹೊಂದಿದ್ದು, ಒಟ್ಟು 9 ಜನ ಸಿಬ್ಬಂದಿಯೊದಿಗೆ ಸರ್ಕಾರಿ ಕೆಲಸದ ದಿನಗಳಂದು ಬೆಳಿಗ್ಗೆ 9 ಗಂಟೆಯಿದ ಸಂಜೆ 5.30 ಗಂಟೆಯವರೆಗೆ ಆಧಾರ್ ಸೇವಾ ಕೇಂದ್ರ ಕಾರ್ಯ ನಿರ್ವಹಿಸಲಿದೆ.

# ಗಂಗಾವತಿಯಲ್ಲಿ 21ನೇ ದಿನದ ಗಣೇಶ ಮೂರ್ತಿ ವಿಸರ್ಜನೆ: ಅ.04 ರಂದು ಮದ್ಯ ಮಾರಾಟ ನಿಷೇಧ

ಕೊಪ್ಪಳ, (ಕರ್ನಾಟಕ ವಾರ್ತೆ): ಜಿಲ್ಲೆಯ ಗಂಗಾವತಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಕ್ಟೋಬರ್ 04 ರಂದು 21ನೇ ದಿನದ ಗಣೇಶ ಮೂರ್ತಿಗಳ ವಿಸರ್ಜನೆ ಪ್ರಯುಕ್ತ ಯಾವುದೇ ರೀತಿಯ ಅಹಿತಕರ ಘಟನೆಗಳು ಜರುಗದಂತೆ ಹಾಗೂ ಕಾನೂನು ಸುವ್ಯವಸ್ಥೆ, ಶಾಂತಿ ಪಾಲನೆಗಾಗಿ ಮತ್ತು ಸಾರ್ವಜನಿಕರ ಹಿತಾಸಕ್ತಿ ಕಾಪಾಡುವ ಹಿತದೃಷ್ಟಿಯಿಂದ ಅಕ್ಟೋಬರ್ 04 ರಂದು ಬೆಳಿಗ್ಗೆ 6 ಗಂಟೆಯಿದ ರಾತ್ರಿ 11 ಗಂಟೆಯವರೆಗೆ ಗಂಗಾವತಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯ 6 ಕಿ.ಮೀ ಅಂತರದ ಪ್ರದೇಶದಲ್ಲಿ ಕರ್ನಾಟಕ ಅಬಕಾರಿ ಕಾಯ್ದೆ-1965 ರ ಕಲಂ 21 ರನ್ವಯ ಮದ್ಯ ಮಾರಾಟವನ್ನು ನಿಷೇಧಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಆದೇಶ ಹೊರಡಿಸಿದ್ದಾರೆ.

ಈ ವಿಷಯವಾಗಿ ಅಬಕಾರಿ ಉಪ ಆಯುಕ್ತರ ನೇತೃತ್ವದಲ್ಲಿ ತನಿಖಾ ತಂಡವನ್ನು ರಚಿಸಿ, ಅದರಲ್ಲಿ ಆರಕ್ಷಕರ ವೃತ್ತ ನಿರೀಕ್ಷಕರು ಹಾಗೂ ಅಬಕಾರಿ ವೃತ್ತ ನಿರೀಕ್ಷಕರು ಕಾರ್ಯನಿರ್ವಹಿಸಲು ಆದೇಶಿಸಿದೆ. ಈ ಆದೇಶವನ್ನು ಅನುಷ್ಠಾನಗೊಳಿಸುವಲ್ಲಿ ನಿರ್ಲಕ್ಷತನ ತೋರಿದವರ ವಿರುದ್ಧ ನಿಯಮಾನುಸಾರ ಕಾನೂನು ರೀತಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

# ಸ್ಕೌಟ್ಸ್‌ಗೈಡ್ಸ್‌ನಿಂದ ಗಾಂಧೀಜಿ, ಶಾಸ್ತ್ರಿ ಜಯಂತಿ ಆಚರಣೆ



ಮಾನ್ವಿ: ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿಯನ್ನು ಮಾನ್ವಿ ಸ್ಥಳೀಯ ಸಂಸ್ಥೆಯ ಸ್ಕೌಟ್ ಸ ಮತ್ತು ಗೈಡ್ಸ್ ವತಿಯಿಂದ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಸ್ಕೌಟ್ಸ್‌ಗೈಡ್ಸ್ ದಳಗಳು ಕಾರ್ಯನಿರ್ವಹಿಸುತ್ತಿರುವ ನೇತಾಜಿ, ಎಸ್ ವಿಎಸ್, ಬಿವಿಆರ್, ಗುರುಕುಲ, ಗಾಂಧಿ, ಕಲ್ಮಠ, ಮಾನ್ವಿ ಪಬ್ಲಿಕ್ ಶಾಲೆ ಹಾಗೂ ಸ್ಟೆಪ್ಪಿಂಗ್ ಸ್ಟೋನ್ ಸೇರಿದಂತೆ ವಿವಿಧ ಶಾಲೆಗಳಲ್ಲಿ ಗಾಂಧೀಜಿ ಮತ್ತು ಶಾಸ್ತ್ರಿ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಲಾಯಿತು.

ಈ ಸಂದರ್ಭದಲ್ಲಿ ಇಬ್ಬರು ಮಹನೀಯರ ಸರಳತೆ, ದೇಶಪ್ರೇಮ, ಸೇವಾ ಮನೋಭಾವ ಹಾಗೂ ಆದರ್ಶಗಳನ್ನು ಸ್ಮರಿಸಿ, ವಿದ್ಯಾರ್ಥಿಗಳು ಅವುಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂಬ ಸಂದೇಶ ನೀಡಲಾಯಿತು.

ಮಾನ್ವಿ ಸ್ಥಳೀಯ ಸಂಸ್ಥೆಯ ಅಧ್ಯಕ್ಷ ಬಿ. ಬಲರಾಮಕೃಷ್ಣ, ಕಾರ್ಯದರ್ಶಿ ಎಂ. ರಾಮಲಿಂಗಪ್ಪ, ಜಂಟಿ ಕಾರ್ಯದರ್ಶಿ ನರಸಿಂಹಮೂರ್ತಿ ದೇಸಾಯಿ, ಖಜಾಂಚಿ ಕೆಮಿಯಾ ನಾಯಕ, ತರಬೇತಿ ಸಲಹೆಗಾರ ವಿಶ್ವನಾಥ್ ಗೌಡ, ತಾಂತ್ರಿಕ ಸಂಯೋಜಕ ಉದಯ್ ಕುಮಾರ್ ಪತ್ತಾರ್, ಸೌಮ್ಯ, ಪರಿಮಳ, ವಸುಂದರ, ಮಲ್ಲಿಕಾರ್ಜುನ, ಶಿವರಾಜಪ್ಪ, ಸುಪ್ರಿಯಾ, ಮೋನೇಶ್, ಬಸಲಿಂಗಪ್ಪ ಸೇರಿದಂತೆ ಹಲವರು ಭಾಗವಹಿಸಿ ಗೌರವ ನಮನ ಸಲ್ಲಿಸಿದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K